ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ-ಧಾರವಾಡ । ಹಾವೇರಿ । ಗದಗ । ಬಾಗಲಕೋಟೆ । ವಿಜಯಪುರ । ಕಲಬುರಗಿ । ತುಮಕೂರು

# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 36 ರಿ.ನಂ : ಕೆಎನ್ಎಎನ್ / 26 / ಎ5487 ಬಳ್ಳಾರಿ ಶುಕ್ರವಾರ ದಿನಾಂಕ : 14-08-2026 ಪುಟ : 04 ಬೆಲೆ : 2-00

## ಸೋಷಿಯಲ್ ಮೀಡಿಯಾ ಮೂಲಕ ಪಾಕ್ ಜೊತೆ ಸಂಪರ್ಕ ಶಂಕೆ; ಇಬ್ಬರು ವಶಕ್ಕೆ

ಕಲಬುರಗಿ: ಪಾಕಿಸ್ತಾನದೊಂದಿಗೆ ನಿರಂತರ ಸಂಪರ್ಕ ಹೊಂದಿದ್ದಾರೆ ಎನ್ನಲಾದ ಇಬ್ಬರನ್ನು ಉತ್ತರ ಪ್ರದೇಶದ ಆ್ಯಂಟಿ ಟೆರರ್ ಸ್ಕ್ವಾಡ್ ಹಾಗೂ ಕಲಬುರಗಿ ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

ಕೇಂದ್ರ ಗುಪ್ತಚರ ಇಲಾಖೆಯಿಂದ ಬಂದ ಮಾಹಿತಿಯ ಆಧಾರದ ಮೇಲೆ ಈ ಕಾರ್ಯಾಚರಣೆ ನಡೆದಿದೆ ಎನ್ನಲಾಗಿದೆ.

ಉತ್ತರ ಪ್ರದೇಶ ಮೂಲದ ಸಮೀರ್ ಹಾಗೂ ಸಲ್ಮಾನ್ ಎಂಬುವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಇಬ್ಬರೂ ಉತ್ತರ ಪ್ರದೇಶದ ನಿವಾಸಿ ವಿಳಾಸ ಹೊಂದಿದ್ದಾರೆ.

ವಾಟ್ಸ್ಆಪ್ ಕಾಲ್ ಹಾಗೂ ಫೇಸ್‌ಬುಕ್ ಮೂಲಕ ಪಾಕಿಸ್ತಾನದ ವ್ಯಕ್ತಿಗಳೊಂದಿಗೆ ಸಂಪರ್ಕದಲ್ಲಿದ್ದರು ಎಂಬ ಮಾಹಿತಿ ಪೊಲೀಸರಿಗೆ ಲಭ್ಯವಾಗಿದೆ.

ಕೆಲವು ದಿನಗಳಿಂದ ಇಬ್ಬರ ಸಾಮಾಜಿಕ ಜಾಲತಾಣ ಚಟುವಟಿಕೆಗಳ ಮೇಲೆ ನಿಗಾ ಇಡಲಾಗಿತ್ತು ಎನ್ನಲಾಗಿದೆ.

2ನೇ ಪುಟಕ್ಕೆ..

# ಬಂದ್‌ಗೆ ನೀರಸ ಪ್ರತಿಕ್ರಿಯೆ!

## ಸಿಗದ ಜನಬೆಂಬಲ, ಬಹುತೇಕ ಕಡೆ ಸಹಜ ಜನಜೀವನ

ಬೆಂಗಳೂರು: ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ಮಾಡುವುದನ್ನು ವಿರೋಧಿಸಿ ಕನ್ನಡ ಪರ ಹೋರಾಟಗಾರ ವಾಟಾಳ್ ನಾಗರಾಜ್ ಕರೆ ನೀಡಿದ್ದ ಕರ್ನಾಟಕ ಬಂದ್‌ಗೆ ರಾಜ್ಯದಲ್ಲಿ ನೀರಸ ಪ್ರತಿಕ್ರಿಯೆ ವ್ಯಕ್ತವಾಯಿತು. ಮಂಡ್ಯದಲ್ಲಿ ತೀವ್ರ ಪ್ರತಿಭಟನೆ, ಹಲವೆಡೆ ಮುನ್ನೆಚ್ಚರಿಕೆ ಕ್ರಮವಾಗಿ ಬಂಧನ ನಡೆದರೂ ಬೆಂಗಳೂರು ಮತ್ತು ಮೈಸೂರಿನಂತಹ ಪ್ರಮುಖ ನಗರಗಳಲ್ಲಿ ಜನಜೀವನಕ್ಕೆ ಯಾವುದೇ ಅಡಚಣೆಯಾಗಲಿಲ್ಲ. ಏಕೆಂದರೆ ಆರಂಭದಲ್ಲಿ ಹೋರಾಟಕ್ಕೆ ಬೆಂಬಲ ನೀಡಿದ್ದ ಸಂಘಟನೆಗಳು ನಂತರ ತಮ್ಮ ಬೆಂಬಲವನ್ನು ಹಿಂಪಡೆದಿದ್ದವು.



ತಮಿಳುನಾಡಿಗೆ 12,000 ಕ್ಯೂಸೆಕ್ ನೀರು ಬಿಡುಗಡೆ ಮಾಡುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ ಮತ್ತು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ನೀಡಿದ ನಿರ್ದೇಶನಗಳನ್ನು ವಿರೋಧಿಸಿ, ಹೋರಾಟಗಾರ ವಾಟಾಳ್ ನಾಗರಾಜ್ ನೇತೃತ್ವದ ಕನ್ನಡ ಸಂಘಟನೆಗಳ ಒಕ್ಕೂಟವು ಈ ಬಂದ್‌ಗೆ ಕರೆ ನೀಡಿತ್ತು. ಆದರೆ, ಹಲವು ಕನ್ನಡ ಸಂಘಟನೆಗಳು ತಮ್ಮ ಬೆಂಬಲವನ್ನು ಹಿಂಪಡೆದಿದ್ದರಿಂದ ಬಂದ್ ಗೆ ನೀರಸ ಪ್ರತಿಕ್ರಿಯೆ ವ್ಯಕ್ತವಾಯಿತು.

ಈ ಮಧ್ಯೆ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ, ಪ್ರವೀಣ್ ಶೆಟ್ಟಿ ಮತ್ತು ಸಾ.ರಾ. ಗೋವಿಂದ್ ಸೇರಿದಂತೆ ಕೆಲವು ಹೋರಾಟಗಾರರು ತಮ್ಮನ್ನು ಭೇಟಿ ಮಾಡಿ, ಬಂದ್ ಕರೆಯನ್ನು ಹಿಂಪಡೆಯುತ್ತಿರುವುದಾಗಿ ತಿಳಿಸಿದ್ದಾರೆ ಎಂದು ಅವರು ಬಂದ್ ಕರೆಯನ್ನು ಹಿಂಪಡೆದದ್ದು ಅತ್ಯಂತ ಸಂತೋಷದ ವಿಷಯ ಎಂದು ತಿಳಿಸಿದರು.

ಪ್ರತಿಭಟನೆಗೂ ಮುನ್ನಾ ವಾಟಾಳ್ ನಾಗರಾಜ್ ಪೊಲೀಸರ ವಶಕ್ಕೆ: ಪ್ರತಿಭಟನೆಯಲ್ಲಿ ಭಾಗವಹಿಸುವ ಮುನ್ನವೇ ಬೆಂಗಳೂರಿನಲ್ಲಿ ತಮ್ಮ ನಿವಾಸದಲ್ಲಿದ್ದ ವಾಟಾಳ್ ನಾಗರಾಜ್ ಅವರನ್ನು ಮುನ್ನೆಚ್ಚರಿಕೆ ಕ್ರಮವಾಗಿ ಪೊಲೀಸರು ವಶಕ್ಕೆ ಪಡೆದರು. ನಗರದ ಡಾಲರ್ಸ್ ಕಾಲೋನಿಯಲ್ಲಿರುವ ಅವರ ನಿವಾಸದಿಂದ ಹೊರಬರಲು ನಿರಾಕರಿಸಿದಾಗ ಪೊಲೀಸರು ಅವರನ್ನು ವಶಕ್ಕೆ ತೆಗೆದುಕೊಂಡರು. ಅವರು

2ನೇ ಪುಟಕ್ಕೆ...

## ಬಂದ್ ವಾಪಸ್ ಪಡೆದ ಸಂಘಟನೆಗಳಿಗೆ ಕೃತಜ್ಞತೆಗಳು: ಸಿಎಂ ಡಿ.ಕೆ ಶಿವಕುಮಾರ್



ಬೆಂಗಳೂರು: ರಾಜ್ಯದ ಹಿತಕ್ಕಾಗಿ ಬಂದ್ ವಾಪಸ್ ಪಡೆದಿರುವ ಎಲ್ಲಾ ಸಂಘಟನೆಗಳಿಗೆ ಧನ್ಯವಾದಗಳು ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದರು. ವಿಧಾನಸೌಧದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಗುರುವಾರ ಪ್ರತಿಕ್ರಿಯೆ ನೀಡಿದರು. ಸಂಘಟನೆಗಳು ಕರೆ ನೀಡಿದ್ದ ಬಂದ್ ಹಿಂಪಡೆದ ಬಗ್ಗೆ ಕೇಳಿದಾಗ, ಎಲ್ಲಾ ಕನ್ನಡಪರ ಸಂಘಟನೆಗಳ ಮುಖಂಡರು ನನ್ನನ್ನು ಭೇಟಿ ಮಾಡಿ ಬಂದ್ ಹಿಂಪಡೆದಿರುವ ಬಗ್ಗೆ ಮಾಹಿತಿ ನೀಡಿದರು. ರಾಜ್ಯದ ಜನರ ಹಿತ ಹಾಗೂ ರೈತರ ಕಲ್ಯಾಣಕ್ಕೆ ಸಂಬಂಧಿಸಿದಂತೆ ಅವರು ಕೆಲವು ಬೇಡಿಕೆ ಇಟ್ಟಿದ್ದಾರೆ. ಅವರ ಬೇಡಿಕೆಗಳನ್ನು ಪರಿಶೀಲನೆ ಮಾಡುವೆ. ಅವರ ಸಹಕಾರಕ್ಕೆ ಕೃತಜ್ಞತೆ" ಎಂದು ತಿಳಿಸಿದರು.

ರಕ್ಷಣಾ ವೇದಿಕೆಯ ಪ್ರಮುಖ ನಾಯಕರು ನಮ್ಮನ್ನು ಭೇಟಿ ಮಾಡಿ ಪ್ರತಿಭಟನೆಯನ್ನು ಹಿಂತೆಗೆದುಕೊಳ್ಳುವುದಾಗಿ ಹೇಳಿದರು. ರಾಜ್ಯದ ಹಿತಾಸಕ್ತಿಗಾಗಿ ನಿಲುವು ತೆಗೆದುಕೊಂಡಿದ್ದಕ್ಕಾಗಿ ನನಗೆ ಸಂತೋಷವಾಗಿದೆ ಮತ್ತು ಅವರಿಗೆ ನನ್ನ ಧನ್ಯವಾದ ಮತ್ತು ಶುಭಾಶಯಗಳನ್ನು ತಿಳಿಸುತ್ತೇನೆ" ಎಂದು ಅವರು ಹೇಳಿದರು. ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ಮಾಡುವುದನ್ನು ವಿರೋಧಿಸಿ ಕನ್ನಡ ಮತ್ತು ರೈತ ಸಂಘಟನೆಗಳು ಕರ್ನಾಟಕ ಬಂದ್‌ಗೆ ಕರೆ ನೀಡಿದ್ದವು.

ಪ್ರಿಯ ಓದುಗರೇ, ಎಲ್ಲರೂ ನಮ್ಮ
**ಅನಂತ ಜನಶಕ್ತಿ** ದಿನ ಪತ್ರಿಕೆಯನ್ನು ತಪ್ಪದೇ ಓದಿರಿ

## 13 ಖಜಾನೆ ಕಚೇರಿಗಳ ಮೇಲೆ ಲೋಕಾಯುಕ್ತ ದಾಳಿ

ಬೆಂಗಳೂರು: ಬಿಲ್ ವಿಲೇವಾರಿಯಲ್ಲಿ ವಿಳಂಬ, ಹಣ ಮಂಜೂರಾತಿಯಲ್ಲಿ ಭ್ರಷ್ಟಾಚಾರ ನಡೆಯುತ್ತಿರುವುದಾಗಿ ಆರೋಪಿಸಿ ಸಾರ್ವಜನಿಕರಿಂದ ಬಂದ ದೂರಿನ ಮೇರೆಗೆ ಖಜಾನೆ ಇಲಾಖೆಯ ವಿವಿಧ ಕಚೇರಿಗಳ ಮೇಲೆ ಲೋಕಾಯುಕ್ತ ತಂಡ ಏಕಾಏಕಿ ದಾಳಿ ನಡೆಸಿ ಪರಿಶೀಲನೆ ನಡೆಸಿದೆ.

ಕೆ.ಆರ್.ವೃತ್ತದಲ್ಲಿರುವ ರಾಜ್ಯ ಹುಜೂರ್ ಖಜಾನೆ ಕಚೇರಿಗೆ ಲೋಕಾಯುಕ್ತ ಬಿ.ಎಸ್.ಪಾಟೀಲ್ ಅವರು, ಕೆಜಿಐಡಿ, ವಿ.ವಿ.ಟವರ್ ಇತರೆ ಖಜಾನೆಗಳ ಮೇಲೆ ಉಪಲೋಕಾಯುಕ್ತ ಕೆ.ಎನ್.ಫಣೀಂದ್ರ, ಬೆಂಗಳೂರು ಉತ್ತರ ಖಜಾನೆ ಮಲ್ಲೇಶ್ವರ, ಯಲಹಂಕ ಸೇರಿದಂತೆ ಖಜಾನೆಗಳ ಮೇಲೆ ಬಿ.ವೀರಪ್ಪ, ಲೋಕಾಯುಕ್ತ ಎಡಿಜಿಪಿ ಮನೀಶ್ ಖರ್ಭೀಕರ್ ನೇತೃತ್ವದ

2ನೇ ಪುಟಕ್ಕೆ...



## ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವುದು ಶ್ರೇಷ್ಠ ಕೆಲಸ:ಎಂಬಿಪಿ



ವಿಜಯಪುರ, ಆ. 13: ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಿ ಅವರ ಕನಸುಗಳಿಗೆ ರೆಕ್ಕೆ ನೀಡುವುದು ಅತ್ಯಂತ ಶ್ರೇಷ್ಠ ಸೇವೆಯಾಗಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಸೋಮವಾರ ಬಬಲೇಶ್ವರ ತಾಲೂಕಿನ ಬೋಳಚಿಕ್ಕಲಗಿ ಗ್ರಾಮದ ಆರ್.ಎಂ.ಎಸ್ ಪ್ರೌಢಶಾಲೆಯಲ್ಲಿ ಟೊಯೊಟಾ ಕಿರ್ಲೋಸ್ಕರ್ ಕಂಪನಿಯ ಸಿಎಸ್‌ಆರ್ ಅನುದಾನದಲ್ಲಿ ರೂ. 2.50 ಕೋ. ವೆಚ್ಚದಲ್ಲಿ ನಿರ್ಮಿಸಲಾದ ಶಾಲೆಯ ನೂತನ ಕೊಠಡಿಗಳು ಮತ್ತು ಕ್ರೀಡಾ ಸಲಕರಣೆಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸರಕಾರಿ ಶಾಲೆಗೆ ಹೊಸ ರೂಪ ನೀಡಿ ಮಕ್ಕಳ ಶೈಕ್ಷಣಿಕ ಹಾದಿ ಮತ್ತಷ್ಟು ಸುಗಮ ಪಡಿಸಲಾಗುತ್ತಿದೆ. ಹಳ್ಳಿಯ ಮಕ್ಕಳಿಗೂ ಜಾಗತಿಕ ಮಟ್ಟದ ಶಿಕ್ಷಣ ಒದಗಿಸಲಾಗುತ್ತಿದೆ. ನಮ್ಮ ಹಳ್ಳಿಯ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಖಾಸಗಿ ಶಾಲೆಗಳಿಗಿಂತ ಯಾವುದೇ

2ನೇ ಪುಟಕ್ಕೆ...

## ರನ್ಯಾ ರಾವ್ ಗೋಲ್ಡ್ ಸ್ಮಗ್ಲಿಂಗ್ ಕೇಸ್‌ಗೆ ಟ್ವಿಸ್ಟ್ ಗೆಳೆಯನಿಂದಲೇ ನಟಿಗೆ ಬಿಗ್ ಶಾಕ್

ಬೆಂಗಳೂರು: ನಟಿ ರನ್ಯಾ ರಾವ್ ಅವರ ಗೋಲ್ಡ್ ಸ್ಮಗ್ಲಿಂಗ್ ಪ್ರಕರಣ ದಿನಕ್ಕೊಂದು ಹೊಸ ತಿರುವು ಪಡೆದುಕೊಳ್ಳುತ್ತಿದ್ದು, ಇದೀಗ ಗೆಳೆಯನೇ ನಟಿಗೆ ಬಿಗ್ ಶಾಕ್ ಕೊಟ್ಟಿದ್ದಾರೆ,

ಡಿಆರ್‌ಐ ಅಧಿಕಾರಿಗಳ ಶೋಕಾಸ್ ನೋಟಿಸ್‌ಗೆ ಬೆದರಿದ ಸ್ಮಗ್ಲರ್ ಕೋರ್ಟ್ ಮುಂದೆ ತಪ್ಪೊಪ್ಪಿಗೆ ನೆಪದಲ್ಲಿ ಅವಾಂತರ ಸೃಷ್ಟಿಸಿದ್ದಾನೆ. ಈ ಮೂಲಕ ರನ್ಯಾ ರಾವ್‌ಗೆ ಗೆಳೆಯನಿಂದಲೇ ಬಿಗ್ ಶಾಕ್ ಎದುರಾಗಿದೆ. ನಾನು ರನ್ಯಾ ರಾವ್‌ಗೆ ಚಿನ್ನದ ಬಿಸ್ಕೆಟ್ ನೀಡಿ-ದ್ದು ನಿಜ. ಆದರೆ ನಾನು ಚಿನ್ನದ ಬಿಸ್ಕೆಟ್ ನೀಡಿ-ದ್ದು ದುಬೈನಲ್ಲಿ. ಹೀಗಾಗಿ ದುಬೈ ಕಾನೂನು ನನಗೆ ಅನ್ವಯ ಆಗಬೇಕು, ಭಾರತದ ಕಾನೂನಲ್ಲ ಮತ್ತು ನಾನು ಭಾರತದಲ್ಲಿ ಯಾವುದೇ ಅವ್ಯವಹಾರ ಮಾಡಿಲ್ಲ ಹಾಗೂ ಚಿನ್ನ ಮಾರಾಟ ಮಾಡುವ ಪ್ರಯತ್ನವನ್ನು ಮಾಡಿಲ್ಲ ಎಂದು ಹೇಳಿದ್ದಾನೆ. ನಾನು ಕೊಟ್ಟ ಚಿನ್ನವನ್ನು ರನ್ಯಾ ಕಳ್ಳಸಾಗಾಣಿಕೆ ಮಾಡಿದ್ದಾಳೆ ಮತ್ತು ಆಕೆಗೆ ಮಾತ್ರ ಭಾರತದ ಕಾನೂನು ಅನ್ವಯ ಆಗಬೇಕು. ಹೀಗಾಗಿ ನನ್ನನ್ನು ಪ್ರಕರಣದಿಂದ ಮುಕ್ತಗೊಳಿಸಬೇಕೆಂದು ಮನವಿ ಮಾಡಿದ್ದಾನೆ. ಈ ಮೂಲಕ ರನ್ಯಾ ರಾವ್ ಗೆಳೆಯನೇ ಕೊಳ್ಳಿ ಇಟ್ಟಿದ್ದಾನೆ.



# ಡಿಕೆಶಿ ನೇತೃತ್ವದ ಮೊದಲ ಅಧಿವೇಶನ: ಸಿದ್ದು ಗೈರು

## "ಮೊದಲ ದಿನ ಸಚಿವರು ಸೇರಿ ಕಾಂಗ್ರೆಸ್‌ನ 65 ರಿಂದ 70ಮಂದಿ ಮಾತ್ರ ಕಲಾಪದಲ್ಲಿ ಭಾಗಿ"

ಬೆಂಗಳೂರು : ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ನೂತನ ಸರಕಾರದ ಮೊದಲ ವಿಧಾನಮಂಡಲದ ಅಧಿವೇಶನದಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗೈರು ಹಾಜರಾಗಿರುವುದು ಗಮನ ಸೆಳೆಯಿತು.

ಹೊಸ ಸರಕಾರದ ವಿಧಾನಸಭೆ ಅಧಿವೇಶನದ ಮೊದಲ ದಿನವಾದ ಗುರುವಾರ ಕಲಾಪದಲ್ಲಿ ಸಿದ್ದರಾಮಯ್ಯ ಗೈರು ಹಾಜರಿ ಚರ್ಚೆಗೆ ಗ್ರಾಸವಾಗಿರುವುದು ಮಾತ್ರವಲ್ಲದೆ, ಸಂಪುಟ ವಿಸ್ತರಣೆಗೆ ಮಾಜಿ ಸಿಎಂ ಸಿದ್ದರಾಮಯ್ಯ ಅಸಮಾಧಾನಗೊಂಡಿದ್ದಾರೆಂಬ ಮಾತುಗಳು ಕೇಳಿ ಬಂದಿವೆ. ಜತೆಗೆ, ಆಡಳಿತ ಪಕ್ಷದ ಸದಸ್ಯರಲ್ಲಿ ಬಹುತೇಕರು ಮೊದಲ ದಿನದ ಕಲಾಪಕ್ಕೆ ಗೈರಾಗಿದ್ದಾರೆ. ಸಂಪುಟ ವಿಸ್ತರಣೆ ಬೆನ್ನಲ್ಲೇ ಕಾಂಗ್ರೆಸ್ ಶಾಸಕರಲ್ಲಿ ಅಸಮಾಧಾನ ಹೆಚ್ಚಾಗಿತ್ತು. ಆದರೆ, ಈಗ ಮೊದಲ ಅಧಿವೇಶನದಲ್ಲಿ ಆಡಳಿತಾರೂಢ ಶಾಸಕರ ಹಾಜರಾತಿ ವಿಚಾರ ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ಗುರುವಾರವೇ ಸಚಿವರು ಸೇರಿ ಕಾಂಗ್ರೆಸ್‌ನ 65 ರಿಂದ 70ಮಂದಿ ಮಾತ್ರ ಕಲಾಪದಲ್ಲಿ ಭಾಗಿಯಾಗಿದ್ದರು. ಗೈರಾದವರ ಪೈಕಿ ಮಾಜಿ ಸಿಎಂ ಸಿದ್ದರಾಮಯ್ಯ, ಸಚಿವ ಸ್ಥಾನದ ಆಕಾಂಕ್ಷಿಗಳಾದ ಪ್ರಿಯಾಕೃಷ್ಣ, ಎಂ. ಕೃಷ್ಣಪ್ಪ, ಯಶವಂತರಾಯಗೌಡ ಪಾಟೀಲ್, ಡಾ.ಎಚ್.ಸಿ.ಮಹದೇವಪ್ಪ, ಕೆ.ವೆಂಕಟೇಶ್ ಸೇರಿದಂತೆ ಪ್ರಮುಖರು ಇದ್ದಾರೆ.

ಇನ್ನೊಂದೆಡೆ, ಎಚ್.ಕೆ.ಪಾಟೀಲ್, ಡಾ.ಎಂ.ಸಿ.ಸುಧಾಕರ್, ಹಂಪನಗೌಡ ಬಾದರ್ಲಿ, ಎಸ್.ಎನ್. ನಾರಾಯಣ ಸ್ವಾಮಿ, ಮಂಕಾಳ ವೈದ್ಯ, ಆರ್.ವಿ.ದೇಶಪಾಂಡೆ, ಶರತ್ ಬಚ್ಚೇಗೌಡ, ಬಿ.ಆರ್.ಪಾಟೀಲ್, ಲಕ್ಷ್ಮೀ ಹೆಬ್ಬಾಳ್ಕರ್, ಅನ್ನಪೂರ್ಣ ತುಕಾರಾಂ, ರೂಪ ಶಶಿಧರ್ ಕಲಾಪದಲ್ಲಿ ಭಾ-ಗಿಯಾಗಿದ್ದರು. 'ಹಣೆ ಬರಹ' ಎಂದ ಹೆಬ್ಬಾಳ್ಕರ್: ಸಚಿವ ಸ್ಥಾನ ವಂಚಿತ ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕಲಾಪಕ್ಕೆ ಆಗಮಿಸುತ್ತಿದ್ದಂತೆ ಹಣೆ ಬರಹದ ಸನ್ನೆ ಮೂಲಕ ಗಮನ ಸೆಳೆದರು. ವಿಧಾನಸಭೆ ಕಲಾಪಕ್ಕೆ ಆಗಮಿಸಿದ ಅವರು ಹಿಂಬದಿ ಸ್ಥಾನದಲ್ಲಿ ಕುಳಿತುಕೊಂಡಿದ್ದರು. ಪರಸ್ಪರ ಮಾತನಾಡಿಕೊಳ್ಳುತ್ತಿದ್ದ ವೇಳೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಹಣೆಯ ಮೇಲೆ ಕೈ ಸನ್ನೆ ಮಾಡಿ, ಸಚಿವ ಸ್ಥಾನ ಸಿಗದಿರುವ ಬಗ್ಗೆ ಎಲ್ಲವೂ ಹಣೆ ಬರಹ ಎಂಬ ಅರ್ಥದಲ್ಲಿ ತಮ್ಮ ಅಸಹಾಯಕತೆ ಹೊರಹಾಕಿದರು.



# ಅಕ್ಷರ ಗ್ಲೋಬಲ್ ಶಾಲಾ-ಕಾಲೇಜಿನಲ್ಲಿ 'ಸಂಕಲ್ಪ-2026' ಸಂಭ್ರಮ



ಬಳ್ಳಾರಿ: ನಗರದ ಸಿರುಗುಪ್ಪ ರಸ್ತೆ ವಕ್ರಾಣಿ ಕ್ಯಾಂಪ್ ಸಮೀಪದ ಅಕ್ಷರ ಗ್ಲೋಬಲ್ ಶಾಲೆ ಮತ್ತು ಕಾಲೇಜಿನಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಆಯೋಜಿಸಿರುವ 'ಸಂಕಲ್ಪ-2026' ಕಾರ್ಯಕ್ರಮದ 4ನೇ ದಿನ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಯಿತು.ಅಕ್ಷರ ಟ್ಯಾಲೆಂಟ್ ಎಕ್ಸ್ ಪೋ ಕಾರ್ಯಕ್ರಮ ಆಯೋಜಿಸಲಾಗಿತ್ತು ಕಾರ್ಯಕ್ರಮಕ್ಕೆ ಅಕ್ಷರ ಗ್ಲೋಬಲ್ ಶಾಲೆ ಮತ್ತು ಕಾಲೇಜಿನ ಅಧ್ಯಕ್ಷರಾದ ಡಾ. ಅನುರಾಧ ಎಸ್.ಜೆ. ಅವರು ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿ ವಿದ್ಯಾರ್ಥಿನಿಯರು ದೇಶಭಕ್ತಿ ಗೀತೆಗಳ ಹಾಡು ಡ್ಯಾನ್ಸ್ ಯೋಗ ಸ್ಕೇಟಿಂಗ್ ಗಮನ ಸೆಳೆಯಿತು.ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಸುಹಾಸಿನಿ ಹಾಗೂ ಶಾಲಾ-ಕಾಲೇಜಿನ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಪೋಷಕರು ಉಪಸ್ಥಿತರಿದ್ದರು.

ಅನಂತ ಜನಶಕ್ತಿ ದಿನ ಪತ್ರಿಕೆಗೆ ಸುದ್ದಿ
ಮತ್ತು ಜಾಹೀರಾತು ನೀಡಲು ಈ ಕೂಡಲೇ ಸಂಪರ್ಕಿಸಿ

# "ಸಂಧ್ಯಾ ಕಿರಣ" ಆರೋಗ್ಯ ಯೋಜನೆಗೆ ಸಂಪುಟ ಅನುಮೋದನೆ

ಬೆಂಗಳೂರು : ಎಪ್ಪತ್ತು ವರ್ಷಕ್ಕಿಂತ ಕಡಿಮೆ ವಯಸ್ಸಿನ ರಾಜ್ಯ ಸರಕಾರಿ ಪಿಂಚಣಿದಾರರು, ಕುಟುಂಬ ಪಿಂಚಣಿದಾರರು ಹಾಗೂ ಅರ್ಹ ಅವಲಂಬಿತ ದಿವ್ಯಾಂಗ ಮಕ್ಕಳಿಗಾಗಿ 'ಸಂಧ್ಯಾ ಕಿರಣ' ವಂತಿಕೆ ಆಧಾರಿತ ನಗದು ರಹಿತ ಆರೋಗ್ಯ ಯೋಜನೆಯನ್ನು ಜಾರಿಗೊಳಿಸಲು ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿದೆ. ಗುರುವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ರಾಜ್ಯ ಸರಕಾರಿ ಪಿಂಚಣಿದಾರರು ಹಾಗೂ ಅವರ ಅರ್ಹ ಅವಲಂಬಿತರಿಗೆ ಸಮಗ್ರ ಆರೋಗ್ಯ ಭದ್ರತೆ ಒದಗಿಸುವ ಉದ್ದೇಶದಿಂದ, ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆಯ ನಿಯಮಾವಳಿಗಳನ್ವಯ 'ಸಂಧ್ಯಾ ಕಿರಣ' ವಂತಿಕೆ ಆಧಾರಿತ ನಗದುರಹಿತ ಆರೋಗ್ಯ ಯೋಜನೆಯನ್ನು ಜಾರಿಗೊಳಿಸಲು ಅನುಮೋದನೆ ನೀಡಲಾಯಿತು.

ಯೋಜನೆಯ ಪ್ರಮುಖ ಅಂಶಗಳು: ಪ್ರಾರಂಭಿಕ ಹಂತದಲ್ಲಿ, 70 ವರ್ಷಕ್ಕಿಂತ ಕಡಿಮೆ ವಯಸ್ಸಿನ ಸುಮಾರು 3.11 ಲಕ್ಷ ರಾಜ್ಯ ಸರಕಾರಿ ಪಿಂಚಣಿದಾರರು ಹಾಗೂ ಅವರ ಅರ್ಹ ಅವಲಂಬಿತರನ್ನು ಒಳಗೊಂಡಂತೆ ಒಟ್ಟು ಸುಮಾರು 4.93 ಲಕ್ಷ ಫಲಾನುಭವಿಗಳು ಯೋಜನೆಯ ವ್ಯಾಪ್ತಿಗೆ ಬರಲಿದ್ದಾರೆ.

ಈ ಯೋಜನೆಯು ಸ್ವಯಂಪ್ರೇರಿತ ವಂತಿಕೆ ಆಧಾರಿತ ನಗದು ರಹಿತ ಆರೋಗ್ಯ ಯೋಜನೆಯಾಗಿದ್ದು, ಅರ್ಹ ಕುಟುಂಬಕ್ಕೆ ವರ್ಷಕ್ಕೆ ಗರಿಷ್ಠ 5 ಲಕ್ಷ ರೂ.ಗಳವರೆಗೆ ಫ್ಲೋ ಟರ್ ಆಧಾರದ ಮೇಲೆ ದ್ವಿತೀಯ, ತೃತೀಯ ಹಾಗೂ ತುರ್ತು ಚಿಕಿತ್ಸಾ ಸೌಲಭ್ಯಗಳನ್ನು ನಗದು ರಹಿತವಾಗಿ ಪಡೆಯಲು ಅವಕಾಶ ಕಲ್ಪಿಸಲಾಗುತ್ತದೆ.

ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಅಡಿಯಲ್ಲಿ ಅನ್ವಯವಾಗುವ



ಆರೋಗ್ಯ ಪ್ರಯೋಜನ ಪ್ಯಾಕೇಜ್‌ಗಳು ಮತ್ತು ಪರಿಷ್ಕೃತ ಪ್ಯಾಕೇಜ್ ದರಗಳು ಈ ಯೋಜನೆಗೆ ಅನ್ವಯವಾಗಲಿವೆ. ಫಲಾನುಭವಿಗಳು ಯೋಜನೆಯಡಿ ನೊಂದಾಯಿತ/ಅನುಮೋದಿತ ಆಸ್ಪತ್ರೆಗಳಲ್ಲಿ, ನಗದುರಹಿತ ಚಿಕಿತ್ಸಾ ಸೌಲಭ್ಯ ಪಡೆಯಬಹುದಾಗಿದೆ.

ನಿಯಮಿತ ಪಿಂಚಣಿದಾರರು ಮೂಲ ಪಿಂಚಣಿಯ ಶೇ.1.25 ರಷ್ಟು ಹಾಗೂ ಕುಟುಂಬ ಪಿಂಚಣಿದಾರರು ಮೂಲ ಕುಟುಂಬ ಪಿಂಚಣಿಯ ಶೇ.0.75 ರಷ್ಟು ವಂತಿಕೆಯನ್ನು ಪಾವತಿಸಬೇಕಾಗುತ್ತದೆ.

ಒಂದನೇ ಪುಟದಿಂದ..

# ಕರ್ನಾಟಕ ಬಂದ್‌ಗೆ ನೀರಸ ಪ್ರತಿಕ್ರಿಯೆ!

## ಸಿಗದ ಜನಬೆಂಬಲ, ಬಹುತೇಕ ಕಡೆ ಸಹಜ ಜನಜೀವನ

ಬಿಎಂಟಿಸಿ-ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಿಂದ ಟೌನ್ ಹಾಲ್, ತದನಂತರ ಫ್ರೀಡಂ ಪಾರ್ಕ್ ವರೆಗೂ ಖಚಿಟಟಥಿ ನಡೆಸಲು ಹಾಗೂ ಅಲ್ಲಿ ಪ್ರತಿಭಟನೆ ನಡೆಸಲು ಯೋಜನೆ ರೂಪಿಸಿದ್ದರು.

ಮೌನ ಪ್ರತಿಭಟನೆಯ ಸಂಕೇತವಾಗಿ ಬಾಯಿಗೆ ಪಟ್ಟಿ ಕಟ್ಟಿ-ಕೊಂಡು ಮನೆಯೊಳಗೆ ಕುಳಿತಿದ್ದ ನಾಗರಾಜ್, ಪೊಲೀಸರೊಂದಿಗೆ ಮಾತನಾಡುವುದಿಲ್ಲ ಅಥವಾ ರ್ಯಾಲಿಯಲ್ಲಿ ಭಾಗವಹಿಸುವುದಿಲ್ಲ ಎಂದು ಹೇಳಿದರು. ರಾಜ್ಯದ ಕುಡಿಯುವ ನೀರು ಮತ್ತು ಕೃಷಿ ಅಗತ್ಯಗಳನ್ನು ಉಲ್ಲೇಖಿಸಿದ ಪ್ರತಿಭಟನಾಕಾರರು, ಇನ್ನು ಮುಂದೆ ಯಾವುದೇ ನೀರನ್ನು ಬಿಡುಗಡೆ ಮಾಡದಂತೆ ಕರ್ನಾಟಕ ಸರ್ಕಾರವನ್ನು ಒತ್ತಾಯಿಸಿದರು.

ಮಂಡ್ಯದಲ್ಲಿ ಖಾಲಿ ಮಡಿಕೆ ಪ್ರದರ್ಶಿಸಿ ಪ್ರತಿಭಟನೆ: ಕಾವೇರಿ ಹೋರಾಟದ ಕೇಂದ್ರಬಿಂದುವಾಗಿರುವ ಮಂಡ್ಯದಲ್ಲಿ ರೈತರು ಮತ್ತು ಕನ್ನಡ ಪರ ಸಂಘಟನೆಗಳು ಸಂಜಯ ವೃತ್ತ ಹಾಗೂ ಇತರ ಸ್ಥಳಗಳಲ್ಲಿ ಪ್ರತಿಭಟನೆ ನಡೆಸಿದವು. ಖಾಲಿ ಮಡಿಕೆ, ಹುರುಳಿಯನ್ನು ಹಿಡಿದುಕೊಂಡ ಪ್ರತಿಭಟನಾಕಾರರು "ನಮ್ಮ ನೀರು, ನಮ್ಮ ಹಕ್ಕು" ಎಂಬ ಘೋಷಣೆಗಳನ್ನು ಕೂಗುತ್ತಾ ಬೆಂಗಳೂರು-ಮೈಸೂರು ಹಳೆಯ ಹೆದ್ದಾರಿಯನ್ನು ತಡೆದರು. ನೀರಿನ ಅಭಾವದಿಂದಾಗಿ ಭತ್ತದ ಬದಲಿಗೆ ರೈತರು ಅನಿವಾರ್ಯವಾಗಿ ಬೆಳೆಯಬೇಕಾದ ಪರ್ಯಾಯ ಬೆಳೆಯ ಸಂಕೇತವಾಗಿ ಹುರುಳಿಯನ್ನು ಬಳಸಲಾಯಿತು. ತಮಿಳುನಾಡಿಗೆ ಒಂದು ಹನಿ ನೀರನ್ನೂ ಬಿಡಬಾರದು ಹಾಗೂ ಸಿಡಬ್ಲ್ಯೂಆರ್‌ಸಿ ಮತ್ತು ಸಿಡಬ್ಲ್ಯೂಎಂಎ ಆದೇಶಗಳನ್ನು ಧಿಕ್ಕರಿಸಬೇಕೆಂದು ಪ್ರತಿಭಟನಾಕಾರರೊಬ್ಬರು ಸರ್ಕಾರಕ್ಕೆ ಮನವಿ ಮಾಡಿದರು.

ನೀರು ಬಿಡುವ ನಿರ್ದೇಶನಗಳನ್ನು ರೈತರ ಪಾಲಿನ 'ಮರಣ ಶಾಸನ' ಎಂದು ಬಣ್ಣಿಸಿದ ಪ್ರತಿಭಟನಾಕಾರರು, ಕಾವೇರಿ ವಿವಾದದಲ್ಲಿ ಕರ್ನಾಟಕದ ಹಿತಾಸಕ್ತಿಗಳನ್ನು ರಕ್ಷಿಸುವಲ್ಲಿ ಸರ್ಕಾರಗಳು "ವಿಫಲವಾಗಿವೆ" ಎಂದು ಟೀಕಿಸಿದರು. ನೀರಿನ ಹಂಚಿಕೆ ನಿರ್ದೇಶನಗಳ ವಿರುದ್ಧ ರಾಜ್ಯ ಸರ್ಕಾರ ದೃಢ ನಿಲುವು ತೆಗೆದುಕೊಳ್ಳಬೇಕೆಂದು ಆಗ್ರಹಿಸುವಾಗ ಅವರು ಮಾಜಿ ಮುಖ್ಯಮಂತ್ರಿಗಳಾದ ಡಿ. ದೇವರಾಜ ಅರಸು ಮತ್ತು ಎಸ್. ಬಂಗಾರಪ್ಪ ಅವರನ್ನೂ ಸ್ಮರಿಸಿದರು.ಸೂಕ್ಷ್ಮವಾದ ಅಂತಾರಾಜ್ಯ ನದಿ ನೀರು ಹಂಚಿಕೆ ವಿವಾದಕ್ಕೆ ಸಂಬಂಧಿಸಿದ ಕಾನೂನು ಹೋರಾಟಗಳಿಗಾಗಿ ಸಾವಿರಾರು ಕೋಟಿ ರೂಪಾಯಿಗಳನ್ನು ಖರ್ಚು ಮಾಡಿದರೂ, ಶಾಶ್ವತ ಪರಿಹಾರ ಕಂಡುಕೊಳ್ಳುವಲ್ಲಿ ಸತತ ಸರ್ಕಾರಗಳು "ವಿಫಲವಾಗಿವೆ" ಎಂದು ಮತ್ತೊಬ್ಬ ಪ್ರತಿಭಟನಾಕಾರರು ಆರೋಪಿಸಿದರು.

ಮೈಸೂರಿನಲ್ಲಿ ಪ್ರತಿಭಟನೆಗೆ ಸೀಮಿತವಾದ ಬಂದ್: ಮೈಸೂರಿನಲ್ಲಿ ಬಂದ್ ಮುಖ್ಯವಾಗಿ ಪ್ರತಿಭಟನೆಗಳಿಗೆ ಸೀಮಿತವಾಗಿತ್ತು. ನಗರದ ಬಸ್ ನಿಲ್ದಾಣದಿಂದ ಬೆಂಗಳೂರು, ಮಂಗಳೂರು ಮತ್ತು ರಾಜ್ಯದ ಇತರ ಭಾಗಗಳಿಗೆ ಬಸ್ ಸೇವೆಗಳು ಎಂದಿನಂತೆ ನಡೆದವು. ವಾಣಿಜ್ಯ ಸಂಸ್ಥೆಗಳು ಅಂಗಡಿಗಳು ಮತ್ತು ಹೋಟೆಲ್‌ಗಳು ಎಂದಿನಂತೆ ತೆರೆದಿದ್ದವು, ಹಾಗೂ ಆಟೋರಿಕ್ಷಾಗಳು ಮತ್ತು ಟ್ಯಾಕ್ಸಿಗಳು ಯಾವುದೇ ಅಡಚಣೆಯಿಲ್ಲದೆ ಸಂಚರಿಸಿದವು. ಉಪನಗರ ಬಸ್ ನಿಲ್ದಾಣದ ಬಳಿ ಬಸ್‌ಗಳನ್ನು ತಡೆಯಲು ಪ್ರಯತ್ನಿಸಿದ ಕನ್ನಡ ಪರ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದರು. ಕರ್ನಾಟಕ ಮತ್ತು ತಮಿಳುನಾಡು ಸರ್ಕಾರಗಳ ವಿರುದ್ಧ ಘೋಷಣೆಗಳನ್ನು ಕೂಗಿದ ಪ್ರತಿಭಟನಾಕಾರರು, ತಮಿಳುನಾಡಿಗೆ ಕಾವೇರಿ ನೀರನ್ನು ಬಿಡಬಾರದೆಂದು ಆಗ್ರಹಿಸಿದರು.

ಕಾವೇರಿ ವಿಷಯದಲ್ಲಿ ತಮಿಳುನಾಡಿನ ಒತ್ತಡಕ್ಕೆ ಸರ್ಕಾರ ಮಣಿಯಬಾರದು ಎಂದು ಕರ್ನಾಟಕ ಸೇನೆಯ ಜಿಲ್ಲಾ ಅಧ್ಯಕ್ಷ ತೇಜಸ್ ಲೋಕೇಶ್ ಗೌಡ ಹೇಳಿದರು. ಕರ್ನಾಟಕ ಮತ್ತು ತಮಿಳುನಾಡು ನಡುವೆ ಕೇಂದ್ರ ಸರ್ಕಾರ ಮಧ್ಯಸ್ಥಿಕೆ ವಹಿಸಬೇಕು ಮತ್ತು ಶಾಶ್ವತ ಪರಿಹಾರ ಕಂಡುಕೊಳ್ಳಲು ಉಭಯ ರಾಜ್ಯಗಳ ಮುಖ್ಯಮಂತ್ರಿಗಳ (ಶಿವಕುಮಾರ್ ಮತ್ತು ಸಿ. ಜೋಸೆಫ್ ವಿಜಯ್) ಸಭೆಯನ್ನು ಕರೆಯಬೇಕು ಎಂದು ಅವರು ಆಗ್ರಹಿಸಿದರು.

ರಾಜಧಾನಿ ಬೆಂಗಳೂರಿನಲ್ಲಿ ಪ್ರಭಾವ ಬೀರದ ಬಂದ್: ರಾಜ್ಯ ರಾಜಧಾನಿಯಲ್ಲಿ ಬಂದ್ ಯಾವುದೇ ಪ್ರಭಾವ ಬೀರಲಿಲ್ಲ. ಕೆಂಪೇಗೌಡ ಬಸ್ ನಿಲ್ದಾಣದಿಂದ ಸರ್ಕಾರಿ ಸ್ವಾಮ್ಯದ ಬಿಎಂಟಿಸಿ (ಃಒಖಿಅ) ಮತ್ತು ಕೆಎಸ್‌ಆರ್‌ಟಿಸಿ ಬಸ್‌ಗಳು ಎಂದಿನಂತೆ ಸಂಚರಿಸಿದವು; ಮುನ್ನೆಚ್ಚರಿಕೆ ಕ್ರಮವಾಗಿ ಪ್ಲಾಟ್‌ಫಾರ್ಮ್‌ಗಳಲ್ಲಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು. ಬಸ್ ತಡೆಯುವ ಪ್ರಯತ್ನ ಅಥವಾ ಕಲ್ಲು ತೂರಾಟದಂತಹ ಘಟನೆಗಳನ್ನು ತಡೆಯಲು ಪೊಲೀಸರು ಗಸ್ತು ತಿರುಗಿದರು. ಬೆಂಗಳೂರಿನ ಶಾಲೆಗಳು, ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳು ಕೂಡ ಎಂದಿನಂತೆ ಕಾರ್ಯನಿರ್ವಹಿಸಿದವು. ದೇವನಹಳ್ಳಿ ಸಮೀಪದ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲೂ ಬಂದ್‌ನ ಯಾವುದೇ ಪರಿಣಾಮ ಉಂಟಾಗಲಿಲ್ಲ.

ಆಧಾರಿತ ಟ್ಯಾಕ್ಸಿಗಳು, ವಿಮಾನ ನಿಲ್ದಾಣದ ಟ್ಯಾಕ್ಸಿಗಳು ಮತ್ತು ಕೆಎಸ್‌ಟಿಡಿಸಿ ಟ್ಯಾಕ್ಸಿಗಳು ಎಂದಿನಂತೆ ಸಂಚರಿಸಿದವು ಹಾಗೂ ಪ್ರಯಾಣಿಕರ ಆಗಮನ ಮತ್ತು ನಿರ್ಗಮನಕ್ಕೆ ಯಾವುದೇ ಅಡಚಣೆ ಉಂಟಾಗಲಿಲ್ಲ.

ಮುನ್ನೆಚ್ಚರಿಕೆ ಕ್ರಮವಾಗಿ ಸಿಐಎಸ್‌ಎಫ್ ಮತ್ತು ರಾಜ್ಯ ಪೊಲೀಸರು ಬಿಗಿ ಭದ್ರತೆಯನ್ನು ಕಾಯ್ದುಕೊಂಡರು. ಹಾಸನದಲ್ಲೂ ಜನಜೀವನ ಸಹಜ ಸ್ಥಿತಿಯಲ್ಲಿತ್ತು. ಬಸ್, ಆಟೋ ಮತ್ತು ಇತರ ಸಾರಿಗೆ ಸೇವೆಗಳು ಎಂದಿನಂತೆ ನಡೆದವು, ಹಾಗೆಯೇ ಅಂಗಡಿಗಳು ಮತ್ತು ಇತರ ವಾಣಿಜ್ಯ ಸಂಸ್ಥೆಗಳು ತೆರೆದಿದ್ದವು.

ಬಳ್ಳಾರಿಯಲ್ಲಿ ಬಂದ್‌ಗೆ ನೀರಸ ಪ್ರತಿಕ್ರಿಯೆ ವ್ಯಕ್ತವಾಯಿತು ಮತ್ತು ಚಟುವಟಿಕೆಗಳು ಸಹಜವಾಗಿ ಮುಂದುವರಿದವು. ಪೊಲೀಸರು ತೀವ್ರ ನಿಗಾ ವಹಿಸಿದ್ದರು ಮತ್ತು ಗೊಂದಲ ಸೃಷ್ಟಿಸಲು ಪ್ರಯತ್ನಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದರು. ಪ್ರತಿಭಟನೆಗಳು ಹೆಚ್ಚಾಗಿ ಸಾಂಕೇತಿಕವಾಗಿರಲಿದ್ದು, ಸಂಘಟನೆಗಳು ಮನವಿ ಪತ್ರಗಳನ್ನು ಸಲ್ಲಿಸಲು ಯೋಜಿಸಿದ್ದವು. ಕೊಪ್ಪಳದಲ್ಲಿ, ಕನ್ನಡ ರಕ್ಷಣಾ ವೇದಿಕೆಯ ಕಾರ್ಯಕರ್ತರು ಹೆಗ್ಗನಾಳ್ ಟೋಲ್ ಗೇಟ್ ಬಳಿ ಪ್ರತಿಭಟನೆ ನಡೆಸಿದರು. ಲಾರಿಗಳನ್ನು ತಡೆದು ಚಾಲಕರಿಗೆ ಹೂವುಗಳನ್ನು ನೀಡಿ, ಬಂದ್ ಮತ್ತು ಕಾವೇರಿ ಹೋರಾಟಕ್ಕೆ ಬೆಂಬಲ ನೀಡುವಂತೆ ಮನವಿ ಮಾಡಿದರು. ನಂತರ ಪೊಲೀಸರು ಅವರನ್ನು ವಶಕ್ಕೆ ಪಡೆದರು. ರಾಜ್ಯಾದ್ಯಂತ, ಆರಂಭದಲ್ಲಿ ಹೋರಾಟಕ್ಕೆ ಬೆಂಬಲ ನೀಡಿದ್ದ ಹಲವಾರು ಸಂಘಟನೆಗಳು, ಪ್ರತಿಭಟನೆಗಳಲ್ಲಿ ಭಾಗವಹಿಸುವಾಗ ಕೇವಲ ನೈತಿಕ ಬೆಂಬಲವನ್ನು ಮಾತ್ರ ನೀಡುವುದಾಗಿ ನಂತರ ಸ್ಪಷ್ಟಪಡಿಸಿದವು.

ಹಲವು ಜಿಲ್ಲೆಗಳ ವ್ಯಾಪಾರಿಗಳು, ಹೋಟೆಲ್ ಮಾಲೀಕರು, ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರು, ರೈತ ಸಂಘಟನೆಗಳು ಮತ್ತು ಇತರ ಗುಂಪುಗಳು ಕಾವೇರಿ ವಿಷಯಕ್ಕೆ ತಮ್ಮ ಬೆಂಬಲವಿದ್ದರೂ, ಬಂದ್ ಅಥವಾ ಸಂಪೂರ್ಣ ಸ್ಥಗಿತಗೊಳಿಸುವಿಕೆ ಇದಕ್ಕೆ ಪರಿಹಾರವಲ್ಲ ಎಂದು ಅಭಿಪ್ರಾಯಪಟ್ಟವು. ಮಂಗಳವಾರದಿಂದ 15 ದಿನಗಳ ಕಾಲ ತಮಿಳುನಾಡಿಗೆ 12,000 ಕ್ಯೂಸೆಕ್ ಕಾವೇರಿ ನೀರನ್ನು ಬಿಡುಗಡೆ ಮಾಡುವಂತೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ (ಅಘಾಒಂ) ಕೈಗೊಂಡ ನಿರ್ಧಾರದ ವಿರುದ್ಧ ಕರ್ನಾಟಕದಲ್ಲಿ ತೀವ್ರ ವಿರೋಧ ವ್ಯಕ್ತವಾಗುತ್ತಿರುವ ಹಿನ್ನೆಲೆಯಲ್ಲಿ ಈ ಬಂದ್ ನಡೆದಿದೆ.

ತಮ್ಮ ಜಲಾಶಯಗಳಿಗೆ ಸರಾಸರಿಗಿಂತ ಕಡಿಮೆ ಪ್ರಮಾಣದ ನೀರು ಹರಿದು ಬಂದಿದೆ ಮತ್ತು ಕುಡಿಯುವ ನೀರು, ಕೃಷಿ ಹಾಗೂ ಅಗತ್ಯ ಅವಶ್ಯಕತೆಗಳಿಗಾಗಿ ನೀರನ್ನು ಸಂರಕ್ಷಿಸಬೇಕಾಗಿದೆ ಎಂದು ಕರ್ನಾಟಕ ಸರ್ಕಾರ ಪ್ರತಿಪಾದಿಸಿದೆ.

# 13 ಖಜಾನೆ ಕಚೇರಿಗಳ ಮೇಲೆ ಲೋಕಾಯುಕ್ತ ದಾಳಿ

ತಂಡವು ನಗರದ ಕಂದಾಯ ಭವನದಲ್ಲಿರುವ ಖಜಾನೆ ಕಚೇರಿ ಮೇಲೆ ದಾಳಿ ನಡೆಸಿದೆ.

ದಾಳಿಯ ವೇಳೆ ಲೋಕಾಯುಕ್ತರ ಕಾರು ಚಾಲಕರ ಬೆಂಗಾವಲು ಪಡೆ ಚಾಲಕರ ಬಳಿಯೂ ಲಂಚ ಪಡೆದಿರುವುದು ಗೊತ್ತಾಗಿದೆ. ಹುಜೂರ್ ಖಜಾನೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಪ್ರಥಮ ದರ್ಜೆ ಸಹಾಯಕ ಕೃಷ್ಣ, ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್ ಅವರ ಪೈಲಟ್ ವಾಹನದ ಚಾಲಕನಿಂದ 3,000 ರೂ. ಲಂಚ ಪಡೆದಿರುವುದು ಬೆಳಕಿಗೆ ಬಂದಿದೆ.

ಆರೋಪಿ ಕೃಷ್ಣ ಅವರ ಡಿಜಿಟಲ್ ವ್ಯಾಲೆಟ್ ಅನ್ನು ಪರಿಶೀಲಿಸಿದಾಗ ಲೋಕಾಯುಕ್ತ ನ್ಯಾಯಮೂರ್ತಿ ಪಾಟೀಲ್ ನೇತೃತ್ವದ ಅಧಿಕಾರಿಗಳ ತಂಡವು ಆತನನ್ನು ಬಂಧಿಸಿತು. ಅವರು ಫೋನ್‌ಪೇ ಮೂಲಕ ನಗರ ಸಶಸ್ತ್ರ ಮೀಸಲು ಪಡೆಯ ಲೋಕಾಯುಕ್ತ ಪೈಲಟ್ ವಾಹನದ ಚಾಲಕನಿಂದ 3,000 ರೂ. ಪಡೆದಿದ್ದಾರೆ ಎಂದು ಆರೋಪಿಸಲಾಗಿದೆ.

ರಾಷ್ಟ್ರೀಯ ಪಿಂಚಣಿ ಯೋಜನೆಯಡಿ ಚಾಲಕ ಸಲ್ಲಿಸಿದ ಸಾಲ ಅರ್ಜಿಯನ್ನು ಅನುಮೋದಿಸಲು ಲಂಚ ಪಡೆಯಲಾಗಿದೆ. ಭೇಟಿಯ ಸಮಯದಲ್ಲಿ, ಲೋಕಾಯುಕ್ತರು ಜಂಟಿ ನಿರ್ದೇಶಕ ಮುನಿರೆಡ್ಡಿ ಬಿ.ಎಂ., ಸಹಾಯಕ ನಿರ್ದೇಶಕ ಶಿವರಾಮ್, ಎಫ್‌ಡಿಎಗಳಾದ ಕೃಷ್ಣ, ಆದಿತ್ಯ ಎ., ಸತ್ಯಪ್ಪ ನಡುವಿನಕೇರಿ ಮತ್ತು ವರ್ಷಿಣಿ ಅವರ ಡಿಜಿಟಲ್ ವ್ಯಾಲೆಟ್‌ಗಳಲ್ಲಿ ಹಲವಾರು ಹಣದ ವಹಿವಾಟುಗಳನ್ನು ಪತ್ತೆಹಚ್ಚಿದರು, ಅದಕ್ಕೆ ಅವರು ಸರಿಯಾದ ವಿವರಣೆಯನ್ನು ನೀಡಿಲ್ಲ.

ಬ್ಯಾಂಕ್ ಖಾತೆಗಳನ್ನು ಪರಿಶೀಲಿಸಿದ ನಂತರ ವಿವರವಾದ ವರದಿಯನ್ನು ನೀಡುವಂತೆ ಲೋಕಾಯುಕ್ತರು ಪೊಲೀಸ್ ಇನ್ಸ್‌ಪೆಕ್ಟರ್‌ಗೆ ಸೂಚಿಸಿದರು. ನ್ಯಾಯಮೂರ್ತಿ ಪಾಟೀಲ್ ಅವರಲ್ಲದೆ, ಉಪ ಲೋಕಾಯುಕ್ತರಾದ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಮತ್ತು ನ್ಯಾಯಮೂರ್ತಿ ಬಿ. ವೀರಪ್ಪ ಕೂಡ ಬೆಂಗಳೂರಿನ ನಗರ ಮತ್ತು ಗ್ರಾಮಾಂತರ ಜಿಲ್ಲೆಗಳ ಹಲವಾರು ಖಜಾನೆ ಕಚೇರಿಗಳಿಗೆ ಭೇಟಿ ನೀಡಿದರು.

# ಸೋಷಿಯಲ್ ಮೀಡಿಯಾ ಮೂಲಕ ಪಾಕ್ ಜೊತೆ ಸಂಪರ್ಕ ಶಂಕೆ; ಇಬ್ಬರು ವಶಕ್ಕೆ

ಪಾಕಿಸ್ತಾನದಿಂದ ನಿರ್ವಹಿಸಲಾಗುತ್ತಿದೆ ಎನ್ನಲಾದ ಕೆಲವು ಸೋಷಿಯಲ್ ಮೀಡಿಯಾ ಪೇಜ್‌ಗಳೊಂದಿಗೆ ಸಮೀರ್ ಸಂಪರ್ಕ ಹೊಂದಿದ್ದ ಬಗ್ಗೆ ಮಾಹಿತಿ ಸಿಕ್ಕ ಹಿನ್ನೆಲೆಯಲ್ಲಿ ಅಧಿಕಾರಿಗಳು ಆತನ ಚಲನವಲನದ ಮೇಲೆ ಮಾನಿಟರಿಂಗ್ ನಡೆಸಿದ್ದರು.

ದಾಳಿ ವೇಳೆ ಸಮೀರ್ ಉಳಿದುಕೊಂಡಿದ್ದ ರೂಮ್‌ನಲ್ಲಿ ಕೆಲವು ಮ್ಯಾಪ್‌ಗಳು ಪತ್ತೆಯಾಗಿವೆ. ಈ ಮ್ಯಾಪ್‌ಗಳು ಏಕೆ ಇಡಲಾಗಿತ್ತು, ಅವುಗಳ ಉದ್ದೇಶವೇನು ಎಂಬುದರ ಬಗ್ಗೆಯೂ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ.

ಕಲಬುರಗಿಯ ಅಜ್ಞಾತ ಸ್ಥಳದಲ್ಲಿ ಇಬ್ಬರನ್ನೂ ವಿಚಾರಣೆ ನಡೆಸಲಾಗಿದ್ದು, ಬಳಿಕ ಮಹಮ್ಮದ್ ಸಮೀರ್‌ನನ್ನು ಉತ್ತರ ಪ್ರದೇಶದ ಂಖಿಖ ತಂಡಕ್ಕೆ ಹಸ್ತಾಂತರಿಸಲಾಗಿದೆ ಎನ್ನಲಾಗಿದೆ. ಪಾಕಿಸ್ತಾನದ ವ್ಯಕ್ತಿಗಳು ಹಾಗೂ ವಿವಿಧ ಸಂಘಟನೆಗಳೊಂದಿಗೆ ಆತನಿಗೆ ಯಾವ ರೀತಿಯ ಸಂಪರ್ಕ ಇತ್ತು ಎಂಬುದರ ಬಗ್ಗೆ ಅಧಿಕಾರಿಗಳು ಮಾಹಿತಿ ಕಲೆಹಾಕುತ್ತಿದ್ದಾರೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಕಲಬುರಗಿ ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ತಿಳಿದುಬಂದಿದೆ. ಸದ್ಯ ತನಿಖೆ ಮುಂದುವರಿದಿದ್ದು, ಆರೋಪಿಗಳ ಸಂಪರ್ಕ ಜಾಲ ಹಾಗೂ ಸಾಮಾಜಿಕ ಜಾಲತಾಣ ಚಟುವಟಿಕೆಗಳ ಬಗ್ಗೆ ಪೊಲೀಸರು ಹೆಚ್ಚಿನ ಮಾಹಿತಿ ಕಲೆಹಾಕುತ್ತಿದ್ದಾರೆ.

# ಗುಣಮಟ್ಟದ ಶಿಕ್ಷಣ ನೀಡುವುದು ಶ್ರೇಷ್ಠ ಕೆಲಸ : ಎಂಬಿಪಿ

ರೀತಿಯಲ್ಲಿ ಕಡಿಮೆಯಿಲ್ಲದ ಅತ್ಯುತ್ತಮ, ಆಹ್ಲಾದಕರ ಕಲಿಕಾ ವಾತಾವರಣ ಸಿಗಬೇಕೆಂಬುದು ನನ್ನ ಬಲವಾದ ಆಸೆಯಾಗಿದೆ. ಸ್ಮಾರ್ಟ್ ಕ್ಲಾಸ್ಗಳು ಮತ್ತು ಸುಸಜ್ಜಿತ ಮೂಲಸೌಕರ್ಯಗಳು ದೊರೆತಾಗ, ಈ ಪುಟ್ಟ ಕಣ್ಣುಗಳಲ್ಲಿ ಹೊಳೆಯುವ ಕನಸುಗಳಿಗೆ ಹೊಸ ರೆಕ್ಕೆಗಳು ಸಿಗಲಿವೆ. ಗುಣಮಟ್ಟದ ಶಿಕ್ಷಣ ಮತ್ತು ಆಧುನಿಕ ಸೌಲಭ್ಯಗಳೊಂದಿಗೆ ನಮ್ಮ ಗ್ರಾಮೀಣ ಮಕ್ಕಳ ಪ್ರತಿಭೆಗೆ ಸೂಕ್ತ ವೇದಿಕೆ ದೊರೆತರೆ, ಅವರು ಜಗತ್ತೇ ಮೆಚ್ಚುವಂತಹ ಸಾಧನೆಗಳನ್ನು ಮಾಡಲಿದ್ದಾರೆ ಎಂಬ ದೃಢ ವಿಶ್ವಾಸವಿದೆ ಎಂದು ಅವರು ಹೇಳಿದರು.

ಜಪಾನಿನ ಟೊಯೋಟಾ ಕಂಪನಿಯವರು ಬೋಳಚಿಕ್ಕಲಕಿಯಂಥ ಸಣ್ಣ ಗ್ರಾಮಕ್ಕೆ ಬಂದು ಶಾಲಾ ಮಕ್ಕಳಿಗೆ ಕೋಣೆ ನಿರ್ಮಿಸಿದ್ದು ನಮ್ಮ ಭಾಗಕ್ಕೆ ಅಪರೂಪದ ಸಂಗತಿಯಾಗಿದೆ. ಮುಂಬರುವ ದಿನಗಳಲ್ಲಿ ಇನ್ನಷ್ಟು ಅನುದಾನ ಬಳಸಿ ಸರಕಾರಿ ಶಾಲೆಗಳನ್ನು ಅಭಿವೃದ್ಧಿ ಪಡಿಸಲಾಗುವುದು. ಹಳ್ಳ ತುಂಬುವ ಯೋಜನೆಯಡಿ ಚೆಕ್ ಡ್ಯಾಮ್ ನಿರ್ಮಿಸಲಾಗುತ್ತಿದೆ. ಇದು ಪೂರ್ಣವಾದರೆ ಜಿಲ್ಲೆಯಲ್ಲಿ ಅಂತರ್ಜಲದ ಕೊರತೆಯೇ ಇರುವುದಿಲ್ಲ. ಇದರ ಜೊತೆ ಕೈಗಾರಿಕೆಗಳ ಸ್ಥಾಪನೆಯಿಂದ ಜಿಲ್ಲೆಯಲ್ಲಿ 10 ಸಾವಿರ ಯುವಕರಿಗೆ ಉದ್ಯೋಗಗಳನ್ನು ಸೃಷ್ಟಿಸಲಾಗುವುದು. ಪೂರ್ವಭಾವಿ ಯೋಚನೆಗಳಿಂದ ಇಂದು ಅಭಿವೃದ್ಧಿ ಶಕೆ ಆರಂಭವಾಗಿದೆ.

# ಹಾಸ್ಟೆಲ್ ಹೊರಗುತ್ತಿಗೆ ನೌಕರರ ಬೇಡಿಕೆ ಜಾರಿಗೆ ಆಗ್ರಹ

ಬಳ್ಳಾರಿ : ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿರುವ ಹಾಸ್ಟೆಲ್, ವಸತಿ ಶಾಲೆ ಹಾಗೂ ಕಾಲೇಜುಗಳಲ್ಲಿ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಹೊರಗುತ್ತಿಗೆ ನೌಕರರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಲಾಯಿತು.

ಕರ್ನಾಟಕ ರಾಜ್ಯ ಸರ್ಕಾರಿ ಹಾಸ್ಟೆಲ್ ಮತ್ತು ವಸತಿ ಶಾಲಾ ಹೊರಗುತ್ತಿಗೆ ನೌಕರರ ಸಂಘದ ರಾಜ್ಯ ಸಮಿತಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದ ನೌಕರರು, ಕಳೆದ 15ರಿಂದ 20 ವರ್ಷಗಳಿಂದ ಅತ್ಯಂತ ಕಡಿಮೆ ವೇತನಕ್ಕೆ ಯಾವುದೇ ಉದ್ಯೋಗ ಭದ್ರತೆಯಿಲ್ಲದೆ ಸೇವೆ ಸಲ್ಲಿಸುತ್ತಿದ್ದೇವೆ. ಸರ್ಕಾರದ ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ಅಡುಗೆಯವರು, ಅಡುಗೆ ಸಹಾಯಕರು, ಸ್ವಚ್ಛತಾಗಾರರು, ಕಾವಲುಗಾರರು, ಡಿ ಗ್ರೂಪ್ ಅಟೆಂಡರ್‌ಗಳು, ಕಂಪ್ಯೂಟರ್ ಆಪರೇಟರ್‌ಗಳು, ಡಾಟಾ ಎಂಟ್ರಿ ಆಪರೇಟರ್‌ಗಳು ಹಾಗೂ ಹೊರಗುತ್ತಿಗೆ ಅತಿಥಿ ಶಿಕ್ಷಕರು ಸೇರಿದಂತೆ ಸಾವಿರಾರು ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಹೇಳಿದರು. ಈ ಹಿನ್ನೆಲೆಯಲ್ಲಿ ಹೊರಗುತ್ತಿಗೆ ನೌಕರರಿಗೆ ತಕ್ಷಣ ಉದ್ಯೋಗ ಭದ್ರತೆ ಕಲ್ಪಿಸುವುದರ ಜೊತೆಗೆ ಕಾರ್ಮಿಕ ಇಲಾಖೆಯಿಂದ ಪರಿಷ್ಕರಿಸಲಾಗಿರುವ ಕನಿಷ್ಠ ವೇತನವನ್ನು ಜಾರಿಗೊಳಿಸಬೇಕು. ನೌಕರರು ಹಲವು ವರ್ಷಗಳಿಂದ ನಿರಂತರವಾಗಿ ಸೇವೆ ಸಲ್ಲಿಸುತ್ತಿರುವುದನ್ನು ಪರಿಗಣಿಸಿ ಅವರನ್ನು ಕಾಯಂಗೊಳಿಸುವ ಕ್ರಮ ಕೈಗೊಳ್ಳಬೇಕು ಎಂದು ಸಂಘದ ರಾಜ್ಯ ಸಮಿತಿ ಅಧ್ಯಕ್ಷ ಎಲ್ಲಪ್ಪ ಸರ್ಕಾರವನ್ನು ಒತ್ತಾಯಿಸಿದರು.

ಈ ಕುರಿತು ಗುರುವಾರ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಹಾಸ್ಟೆಲ್ ಮತ್ತು ವಸತಿ ಶಾಲೆಗಳ ಹೊರಗುತ್ತಿಗೆ ನೌಕರರಿಗೆ ಕನಿಷ್ಠ ವೇತನವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು. ಉದ್ಯೋಗ ಸೇವಾ ಭದ್ರತೆ ಒದಗಿಸಬೇಕು. ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಎಲ್ಲ ಹೊರಗುತ್ತಿಗೆ ನೌಕರರನ್ನು ಕಾಯಂಗೊಳಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ. ಹೊರಗುತ್ತಿಗೆ ನೌಕರರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು. ಹಲವು ವರ್ಷಗಳಿಂದ ವಿದ್ಯಾರ್ಥಿಗಳ ಸೇವೆಯಲ್ಲಿ ತೊಡಗಿಸಿಕೊಂಡಿರುವ ನೌಕರರ ಜೀವನೋಪಾಯ ಹಾಗೂ ಕುಟುಂಬದ ಭದ್ರತೆಯನ್ನು ಪರಿಗಣಿಸಿ ಸರ್ಕಾರ ಮಾನವೀಯ ದೃಷ್ಟಿಯಿಂದ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು. ಸರ್ಕಾರ ಕೂಡಲೇ ಬೇಡಿಕೆಗಳನ್ನು ಈಡೇರಿಸದಿದ್ದರೆ ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಸಂಘದ ಪದಾಧಿಕಾರಿಗಳು ಎಚ್ಚರಿಕೆ ನೀಡಿ–ದರು. ಈ ಸಂದರ್ಭದಲ್ಲಿ ಸಂಘದ ರಾಜ್ಯ ಉಪಾಧ್ಯಕ್ಷ ಮರಡಿ ಜಂಟಯ್ಯನಾಯಕ, ಕಾರ್ಯದರ್ಶಿ ವಿ. ಗುರುಸ್ವಾಮಿ, ಎಐಯುಟಿಯುಸಿಯ ಗೋವಿಂದ ಸೇರಿದಂತೆ ಹಾಸ್ಟೆಲ್ ಹಾಗೂ ವಸತಿ ಶಾಲೆಗಳ ಹಲವಾರು ಹೊರಗುತ್ತಿಗೆ ನೌಕರರು ಉಪಸ್ಥಿತರಿದ್ದರು.

### ಸಂಪುಟ ದರ್ಜೆ ಸ್ಥಾನಮಾನದೊಂದಿಗೆ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಯಾಗಿ ನೇಮಕ:

# ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾದ ಶಾಸಕ ಪೊನ್ನಣ್ಣ

ಬೆಂಗಳೂರು: ಸಂಪುಟ ದರ್ಜೆ ಸ್ಥಾನಮಾನದೊಂದಿಗೆ ಕರ್ನಾಟಕ ರಾಜ್ಯದ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಯಾಗಿ ನೇಮಕಗೊಂಡಿರುವ ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಅಜ್ಜಿಕುಟ್ಟಿರ ಎಸ್. ಪೊನ್ನಣ್ಣ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾಗಿ ಅಭಿನಂದನೆ ಸಲ್ಲಿಸಿದರು. ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಯಾಗಿ ನೇಮಕಗೊಂಡ ಹಿನ್ನೆಲೆಯಲ್ಲಿ ಶಾಸಕ ಅಜ್ಜಿಕುಟ್ಟಿರ ಎಸ್. ಪೊನ್ನಣ್ಣ ಅವರು ತಮ್ಮ ಧರ್ಮಪತ್ನಿ ಶ್ರೀಮತಿ ಕಾಂಚನ್ ಪೊನ್ನಣ್ಣ ಹಾಗೂ ಪುತ್ರಿಯೊಂದಿಗೆ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳಿಗೆ ಅಭಿನಂದನೆ ಸಲ್ಲಿಸಿ, ನೂತನ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸುವ ಕುರಿತು ಚರ್ಚಿಸಿದರು. ಸಂಪುಟ ದರ್ಜೆ ಸ್ಥಾನಮಾನದೊಂದಿಗೆ ದೊರೆತಿರುವ ಈ ಮಹತ್ವದ ಜವಾಬ್ದಾರಿ ಪೊನ್ನಣ್ಣ ಅವರ ರಾಜಕೀಯ ಜೀವನದಲ್ಲಿ ಮತ್ತೊಂದು ಪ್ರಮುಖ ಹಂತವಾಗಿದೆ. ವಿರಾಜಪೇಟೆ ವಿಧಾನಸಭಾ ಕ್ಷೇತ್ರದ ಶಾಸಕರಾಗಿ ಕ್ಷೇತ್ರದ ಅಭಿವೃದ್ಧಿ, ಜನರ ಸಮಸ್ಯೆಗಳ ಪರಿಹಾರ ಹಾಗೂ ವಿವಿಧ ಸಾರ್ವಜನಿಕ ವಿಚಾರಗಳಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿರುವ ಪೊನ್ನಣ್ಣ ಅವರಿಗೆ ಇದೀಗ



ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಯ ಹೆಚ್ಚುವರಿ ಜವಾಬ್ದಾರಿ ದೊರೆತಿದೆ. ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಯಾಗಿ ಸರ್ಕಾರದ ವಿವಿಧ ಇಲಾಖೆಗಳು ಹಾಗೂ ಮುಖ್ಯಮಂತ್ರಿಗಳ ಕಚೇರಿಯೊಂದಿಗೆ ಸಮನ್ವಯ ಸಾಧಿಸುವುದು, ಸಾರ್ವಜನಿಕರು ಹಾಗೂ ಜನಪ್ರತಿನಿಧಿಗಳಿಂದ ಬರುವ ವಿವಿಧ ಮನವಿಗಳು ಮತ್ತು ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವುದು ಸೇರಿದಂತೆ ಹಲವು ಪ್ರಮುಖ ಜವಾಬ್ದಾರಿಗಳನ್ನು ನಿರ್ವಹಿಸುವ ಅವಕಾಶ ಪೊನ್ನಣ್ಣ ಅವರಿಗೆ ದೊರೆತಿದೆ. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಶಾಸಕ ಪೊನ್ನಣ್ಣ ಅವರಿಗೆ ಶುಭ ಹಾರೈಸಿ, ನೂತನ ಜವಾಬ್ದಾರಿಯನ್ನು ಪರಿಣಾಮಕಾರಿಯಾಗಿ ನಿರ್ವಹಿಸುವ ವಿಶ್ವಾಸ ವ್ಯಕ್ತಪಡಿಸಿದರು.




# ದೇವರಾಜ ಅರಸು ಜಯಂತಿ ಪ್ರಯುಕ್ತ 23ನೇ ವಾರ್ಡಿನಲ್ಲಿ ಆರೋಗ್ಯ ತಪಾಸಣಾ ಶಿಬಿರ

ಬಳ್ಳಾರಿ : ಹಿಂದುಳಿದ ವರ್ಗಗಳ ನೇತಾರ ದಿವಂಗತ ಡಿ. ದೇವರಾಜ ಅರಸು ಅವರ ಜನ್ಮದಿನಾಚರಣೆಯ ಅಂಗವಾಗಿ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡು, ಜಯಂತಿಯನ್ನು ಅರ್ಥಪೂರ್ಣವಾಗಿ ಹಾಗೂ ವಿಜೃಂಭಣೆಯಿಂದ ಆಚರಿಸಲಾಗವುದು ಎಂದು ಮೇಯರ್ ಪಿ ಗಾದೆಪ್ಪ ತಿಳಿಸಿದ್ದಾರೆ .

ಇದರ ಪ್ರಯುಕ್ತ ನಗರದ 23ನೇ ವಾರ್ಡ್ ನಾಗಪ್ಪ ಕಟ್ಟೆ ಹತ್ತಿರ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಆಸಕ್ತರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಆಯೋಜಕರು ಮತ್ತು ಮೇಯರ್ ಪಿ ಗಾದೆಪ್ಪ ತಿಳಿಸಿದ್ದಾರೆ.

# ಪ್ರೇಯಸಿ ಆತ್ಮಹತ್ಯೆ ಬೆನ್ನಲ್ಲೇ ನೇಣಿಗೆ ಕೊರಳೊಡ್ಡಿದ ಪ್ರಿಯಕರ





ಧಾರವಾಡ: ಪ್ರೇಯಸಿ ಆತ್ಮಹತ್ಯೆ ಮಾಡಿಕೊಂಡ ಸುದ್ದಿ ತಿಳಿದು ಪ್ರಿಯಕರ ಸಹ ನೇಣಿಗೆ ಶರಣಾದ ಘಟನೆ ದಾನೇಶ್ವರಿ ನಗರದ ಪಿಜಿ ಯೊಂದರಲ್ಲಿ ನಡೆದಿದೆ.

ಧಾರವಾಡ ತಾಲೂಕಿನ ಕೋಟಬಾಗಿ ಗ್ರಾಮದ ತರುಣ್ ಸಾಗರ್ ಕುರಕುರಿ (21) ಆತ್ಮಹತ್ಯೆಗೆ ಶರಣಾದ ಯುವಕ. ಈತ ನಗರದ ವಾಚ್ ಶಾಪ್‌ನಲ್ಲಿ ಕೆಲಸ ಮಾಡುತ್ತಿದ್ದ. ಆ.12 ರಂದು ಈತನ ಪ್ರೇಯಸಿ ಮೇಘಾ ಗುಬ್ಬನ್ನವರ್ (20) ಕ್ರಿಮಿನಾಶಕ ಸೇವಿಸಿ ಆತ್ಮಹತ್ಯೆಗೆ ಶರಣಾಗಿದ್ದಳು.

ಮನೆಯಲ್ಲಿ ಹೆಚ್ಚು ಮೊಬೈಲ್ ಬಳಸುತ್ತಿದ್ದೀಯ ಎಂದು ಬೈದಿದ್ದಕ್ಕೆ ಯುವತಿ ಆತ್ಮಹತ್ಯೆ ಮಾಡಿಕೊಂಡಿದ್ದಳು ಎನ್ನಲಾಗಿದೆ. ಈಕೆಯ ಆತ್ಮಹತ್ಯೆ ಸುದ್ದಿ ಕೇಳಿ ಸ್ನೇಹಿತನ ರೂಮ್‌ನಲ್ಲಿ ಯುವಕ ಆತ್ಮಹತ್ಯೆಗೆ ಶರಣಾಗಿದ್ದಾನೆ.

ತರುಣ್, ಗೆಳೆಯನ ರೂಮ್‌ನಲ್ಲಿ ಬಂದು ತಂಗಿದ್ದ. ಕಳೆದ ರಾತ್ರಿ ಗೆಳೆಯನ ಮುಂದೆ ಹುಡುಗಿ ಜೊತೆ ಜಗಳವಾಗಿದೆ, ಆಕೆಯ ಸಹೋದರನಿಗೆ ಈ ವಿಷಯ ಗೊತ್ತಾಗಿದೆ ಎಂದು ಹೇಳಿದ್ದ ಎನ್ನಲಾಗಿದೆ.

ಅಂಗಡಿಯೊಂದರಲ್ಲಿ ಕೆಲಸ ಮಾಡುತ್ತಿದ್ದ ಮೇಘಾ ಹಾಗೂ ತರುಣ್ ಮಧ್ಯೆ ಪ್ರೇಮ ಕಹಾನಿ ಇತ್ತು ಎಂಬುದು ಇದೀಗ ಗೊತ್ತಾಗಿದೆ.

ಈ ಬಗ್ಗೆ ತರಣ್ ಸಾಗರ್ ಪೋಷಕರಿಗೆ ಕೇಳಿದರೆ ಪ್ರೇಮದ ಬಗ್ಗೆ ಗೊತ್ತಿರಲಿಲ್ಲ. ಬೆಳಗ್ಗೆ ಫೋನ್ ಎತ್ತದೇ ಇದ್ದಾಗ ಹುಡುಕಾಟ ನಡೆಸಿದಾಗ, ಪ್ರಕರಣ ಬೆಳಕಿಗೆ ಬಂದಿದೆ ಎಂದು ತಿಳಿಸಿದ್ದಾರೆ. ಸ್ಥಳಕ್ಕೆ ವಿದ್ಯಾಗಿರಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಮಲೆ ಮಹದೇಶ್ವರ ಬೆಟ್ಟದಲ್ಲಿ 108 ಕುಂಭಾಭಿಷೇಕ

ಚಾಮರಾಜನಗರ: ಶ್ರಾವಣ ಮಾಸದ ಅಮಾವಾಸ್ಯೆ ಅಂಗವಾಗಿ ತಾಲೂಕಿನ ಪ್ರಸಿದ್ಧ ಧಾರ್ಮಿಕ ಯಾತ್ರಾಸ್ಥಳ ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಶ್ರೀ ಮಲೆ ಮಹದೇಶ್ವರ ಸ್ವಾಮಿಗೆ ವಿಶೇಷ ಪೂಜಾ ಕೈಂಕರ್ಯಗಳು ಹಾಗೂ 108 ಕುಂಭಾಭಿಷೇಕ ಭಕ್ತಿಭಾವ ಮತ್ತು ವೈಭವದಿಂದ ನೆರವೇರಿತು. ಅಮಾವಾಸ್ಯೆ ಹಿನ್ನೆಲೆಯಲ್ಲಿ ದೇವಾಲಯಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಶ್ರೀ ಮಲೆ ಮಹದೇಶ್ವರ ಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆಯಲ್ಲಿ ಪಾಲ್ಗೊಂಡರು. ದೇವಾಲಯದಲ್ಲಿ ವಿವಿಧ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿ, ಸ್ವಾಮಿಗೆ ಅಭಿಷೇಕ ಹಾಗೂ ವಿಶೇಷ ಅಲಂಕಾರ ಮಾಡಲಾಯಿತು.

108 ಕುಂಭಗಳಲ್ಲಿ ಪವಿತ್ರ ಜಲವನ್ನು ಸಂಗ್ರಹಿಸಿ ವಿಶೇಷ ಪೂಜಾ ವಿಧಿವಿಧಾನಗಳೊಂದಿಗೆ ಕುಂಭಾಭಿಷೇಕ ನೆರವೇರಿಸಲಾಯಿತು. ಬಳಿಕ ಸ್ವಾಮಿಗೆ ಮಹಾಮಂಗಳಾರತಿ ಸಲ್ಲಿಸಲಾಯಿತು. ಬೆಟ್ಟದಲ್ಲಿ ನಡೆದ ಧಾರ್ಮಿಕ ಕಾರ್ಯಕ್ರಮದಲ್ಲಿ ಭಕ್ತರು ಶ್ರದ್ಧಾ–ಭಕ್ತಿಯಿಂದ ಪಾಲ್ಗೊಂಡು ಸ್ವಾಮಿಯ ದರ್ಶನ ಪಡೆದು ಪುನೀತರಾದರು.



# ಪರಪ್ಪನ ಅಗ್ರಹಾರದಲ್ಲಿ ಮೊಬೈಲ್ ಪತ್ತೆ ಪ್ರಕರಣ 2ನೇ ಎಫ್‌ಐಆರ್ ದಾಖಲು

ಬೆಂಗಳೂರು: ಪರಪ್ಪನ ಅಗ್ರಹಾರ ಜೈಲಲ್ಲಿ ಮೊಬೈಲ್‌ಗಳು ಪತ್ತೆಯಾದ ವಿಚಾರ–ಕ್ಕೆ ಸಂಬಂಧಿಸಿದಂತೆ 2ನೇ ಎಫ್ಐಆರ್ ದಾಖಲಾಗಿದೆ.

ಸಿಸಿಬಿ ಅಧಿಕಾರಿಗಳು ದಾಳಿ ನಡೆಸಿದ ವೇಳೆ, ಮೂರು ಮೊಬೈಲ್, 2 ಪೆನ್‌ಡ್ರೈವ್ ಸಿಕ್ಕಿದ್ದವು. ಬಳಿಕ ಜೈಲಾಧಿಕಾರಿಗಳು ನಡೆಸಿದ ದಾಳಿ ವೇಳೆ 2 ಮೊಬೈಲ್ ಹಾಗೂ 1 ಪೆನ್‌ಡ್ರೈವ್ ಪತ್ತೆಯಾಗಿತ್ತು. ಅಲ್ಲದೇ ಸಿಮ್ ಇಲ್ಲದ ಕಲ್ಲಿನಿಂದ ಜಜ್ಜಿ ಒಡೆದು ಹಾಕಿರುವ ಎರಡು ಫೋನ್, ಒಂದು ಪೆನ್‌ಡ್ರೈವ್ ಪತ್ತೆಯಾಗಿತ್ತು. ಈ ಸಂಬಂಧ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿದೆ.

ಆಗಸ್ಟ್ 11ರ ರಾತ್ರಿ 11:30 ರಿಂದ ತಡರಾತ್ರಿ 2 ಗಂಟೆ ವರೆಗೂ ಜೈಲಾಧಿಕಾರಿಗಳು ದಾಳಿ ನಡೆಸಿದರು. ಭದ್ರತಾ ವಿಭಾಗ–01, 02 ಮತ್ತು 03ರಲ್ಲಿ ಅಧಿಕಾರಿ ಹಾಗೂ ಸಿಬ್ಬಂದಿ ತಪಾಸಣೆ ನಡೆಸಿದ್ದರು. ಭದ್ರತಾ ವಿಭಾಗ–02ರ ಹಿಂಭಾಗ ಭಾಗ–01ರ ಕೆಳಭಾಗದ ಖಾಲಿ ಜಾಗದಲ್ಲಿ 1 ಮೊಬೈಲ್, ಪೆನ್‌ಡ್ರೈವ್ ಪತ್ತೆಯಾಗಿದ್ದವು.

ಕಲ್ಲಿನ ಕೆಳಗೆ ಸಿಮ್ ಇಲ್ಲದ ಮೊಬೈಲ್, 32 ಜಿಬಿ ಪೆನ್ ಡ್ರೈವ್ ಸಿಕ್ಕಿತ್ತು. ಭದ್ರತಾ ವಿಭಾಗ 02 ರ ಹಿಂಭಾಗದ ಖಾಲಿ ಜಾಗದಲ್ಲಿ ಕಲ್ಲಿನ ಕೆಳಗೆ ಒಂದು ಮೊಬೈಲ್ ಪತ್ತೆಯಾಗಿತ್ತು. ನಿಷೇಧಿತ ವಸ್ತು ಜೈಲಿನ ಒಳಗೆ ತಂದವರು, ಬಳಸಿದವರ ಪತ್ತೆ ಮಾಡಿ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಕಾರಾಗೃಹದ ಪ್ರಭಾರ ಅಧೀಕ್ಷಕ ಬಿ.ಆರ್ ಅಂದಾನಿ ನೀಡಿದ ದೂರಿನ ಅನ್ವಯ ಎಫ್.ಐ.ಆರ್ ದಾಖಲಾಗಿದೆ.

ಪ್ರಜ್ವಲ್ ರೇವಣ್ಣ ಬ್ಯಾರಕ್‌ನಲ್ಲಿ ಮೊಬೈಲ್ ಪತ್ತೆ ಪ್ರಕರಣ, ಜೈಲು ಅಧಿಕಾರಿಗಳ ನಿರ್ಲಕ್ಷ್ಯ ಇರೋದು ಸಾಬೀತಾಗಿದೆ.

### ತಮಿಳುನಾಡಿಗೆ ನೀರು ಬಿಟ್ರೆ ಮತ್ತೆ ಕರ್ನಾಟಕ ಬಂದ್

# ಸರ್ಕಾರಕ್ಕೆ ವಾಟಾಳ್ ಎಚ್ಚರಿಕೆ

ಬೆಂಗಳೂರು: ತಮಿಳುನಾಡಿಗೆ ನೀರು ಬಿಟ್ಟರೆ ಮತ್ತೆ ಕರ್ನಾಟಕ ಬಂದ್ ಮಾಡುತ್ತೇವೆ ಎಂದು ಸರ್ಕಾರಕ್ಕೆ ವಾಟಾಳ್ ನಾಗರಾಜ್ ಎಚ್ಚರಿಕೆ ನೀಡಿದ್ದಾರೆ.

ಕಾವೇರಿ, ಕಳಸಬಂಡೂರಿ, ಮಹಾದಾಯಿ, ಮೇಕೆದಾಟು, ಉತ್ತರ ಕನ್ನಡ ಹಾಗೂ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಸೇರಿದಂತೆ ಹಲವು ವಿಚಾರಗಳ ಕುರಿತು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಅಖಂಡ ಕರ್ನಾಟಕ ಬಂದ್ ಇಡೀ ರಾಜ್ಯಾದ್ಯಂತ ಚೆನ್ನಾಗಿ ಶಬ್ದ ಮಾಡಿದೆ. ಒಂದಿಲ್ಲೊಂದು ಪ್ರತಿಭಟನೆಯಾಗಿದೆ. ದೇಶ ಹಾಗೂ ರಾಜ್ಯದ ಗಮನ ಸೆಳೆದಿದೆ. ಇದಕ್ಕೆ ಜನರಿಗೆ ಅಭಿನಂದನೆ ಸಲ್ಲಿಸತ್ತೇನೆ. ಸ್ಟೇಷನ್‌ನಲ್ಲಿ ಕುಳಿತಾಗಲೇ ಬಂದ್ ವಾಪಸ್ ಪಡೆದಿದ್ದೇವೆ ಅಂತಾ ಸ್ನೇಹಿತರು ಹೇಳಿದ್ರು. ಒಂದಿಷ್ಟು ಹಿಂದೆ ಪಡೆದಿರಲಿಲ್ಲ. ಕಾವೇರಿ ನೀರು ಇದರ ಸಮಸ್ಯೆಗಳು ಇವತ್ತಿಗೆ ಮುಗಿಯಲ್ಲ. ಮಂಡ್ಯ,ಬೆಳಗಾವಿ ಎಲ್ಲೆಡೆಯೂ ಬಂದ್ ಆಯಿತು. ನೀರು ಬಿಟ್ಟೇ ಬಿಡುತ್ತಾರೆ. ಸುಪ್ರೀಂಕೋರ್ಟ್‌ಗೆ ಹೋಗುತ್ತಾರೆ. ನೀರು ಬಿಟ್ರೆ ಮತ್ತೆ ಕರ್ನಾಟಕ ಬಂದ್ ಮಾಡತ್ತೇವೆ ಎಂದು ವಾರ್ನ್ ಮಾಡಿದರು.

ಹೋಟೆಲ್ ಮಾಲೀಕರೇ ಹೇಳಿಕೆ ಕೊಡುವಾಗ ಗಮನಹರಿಸಿ. ಇನ್ನೂ ಎರಡು ಗಂಟೆ ಹೋಟೆಲ್ ತೆರೆಯುತ್ತೇವೆ ಅಂತಾರೆ. ಮೊದಲು ನೀರಿಲ್ಲದೇ ಇದ್ರೇ ಎಫೆಕ್ಟ್ ಆಗೋದು ಹೋಟೆಲ್‌ನವರಿಗೆ. ಈ ತಿಂಗಳಲ್ಲೇ ನೀರು ಬಿಡಬಹುದು. ಈ ತಿಂಗಳು ಬಿಟ್ಟರೆ ರಸ್ತೆ ಹೆದ್ದಾರಿ ಬಂದ್ ಮಾಡುತ್ತೇವೆ. ಬಂದ್‌ನಂತಹ ದೊಡ್ಡ ಸಾಧನವಿಲ್ಲ ಎಂದರು. ನಮ್ಮ ಮನೆಯಲ್ಲಿ ಇವತ್ತು ಬೆಳಗ್ಗೆ ನನ್ನನ್ನು ಅರೆಸ್ಟ್ ಮಾಡಿದ್ರು. ನಮ್ಮ ಮನೆ ಗೇಟ್ ಬಳಿ ಪೋಲಿಸರು ವಶಪಡಿಸಿಕೊಂಡರು. ಮಿಲಿಟರಿ ಪ್ರಭುತ್ವಕ್ಕಿಂತ ಕೆಟ್ಟದಾಗಿ ಪೋಲಿಸರು ನನ್ನನ್ನು ನಡೆಸಿಕೊಂಡರು. ನನ್ನ ಜೀವನದಲ್ಲಿ ನಮ್ಮ ಹಕ್ಕನ್ನು ಕಿತ್ತುಕೊಂಡರು. ಯಾವ ಕಾರಣ–ಕ್ಕೂ ಮಾಧ್ಯಮವರ ಜೊತೆ ಮಾತನಾಡಬಾರದು ಎಂದರು. ಅದಕ್ಕೆ ಬಾಯಿಗೆ ಪ್ಲಾಸ್ಟರ್ ಹಾಕಿದೆ. ಈ ಪ್ಲಾಸ್ಟರ್ ಅನ್ನು ಪೋಲಿಸರು ಎಳೆದಾಡಿದರು. ಪಾಕಿಸ್ತಾನದ ಟೆರರಿಸ್ಟ್ ರೀತಿ ನನ್ನನ್ನು ಎಳೆದಾಡಿದರು. ಹೆಗಡೆನಗರದಲ್ಲಿ 10–15 ಕಿಲೋಮೀಟರ್ ದೂರದಲ್ಲಿ ನನ್ನ ಕರೆದುಕೊಂಡು ಹೋದರು. ನನ್ನ ಫೋನ್ ಕಿತ್ತುಕೊಂಡರು. ಅದಕ್ಕೆ ಪೋಲಿಸರ ಜನ್ಮ ಜಾಲಾಡಿದೆ, ಬಾಯಿ ಬಂದ ಹಾಗೆ ಬೈದೆ ಎಂದು ಪೊಲೀಸರ ನಡೆ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ನನ್ನ ಜೀವನದಲ್ಲಿ ಯಾವ ಸರ್ಕಾರವೂ ಈ ರೀತಿ ಮಾಡಿರಲಿಲ್ಲ. ಈ ರೀತಿ ನಡೆದುಕೊಳ್ಳಲು ಡಿಕೆ ಶಿವಕುಮಾರ್ ಹೇಳಿದ್ರಾ? ಗೃಹ ಸಚಿವರು ಹೇಳಿದ್ರಾ? ಇವತ್ತು ಆರು ಗಂಟೆಗೆ ಬಂದ್ ಮುಗಿದಿದೆ. ಮಹದಾಯಿ, ಕಳಸಾ ಬಂಡೂರಿ ಯೋಜನೆಯಾಗಬೇಕು. ಬೆಳಗಾವಿ ಅವಿಭಾಜ್ಯ ಅಂಗ ಎಂದು ಘೋಷಿಸಬೇಕು. ಕನ್ನಡ ಮಾಧ್ಯಮ ಶಾಲೆಗಳಿಗೆ ಅನುದಾನ ನೀಡಬೇಕು, ಹೊಸ ಶಾಲೆಗಳಾಗಬೇಕು. ಕನ್ನಡದಲ್ಲಿ ನಾಮಫಲಕವಾಗಬೇಕು. ಬೆಂಗಳೂರಲ್ಲಿ ಲಕ್ಷಾಂತರ ಜನ ತಮಿಳರು ಇದ್ದಾರೆ. ಬಿಡದಿ ಉಪನಗರ ಖಂಡಿತ ಬೇಡ. ಕನ್ನಡ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆ ತುಂಬಬೇಕು. ಸಿಎಂ ಡಿಕೆ ಶಿವಕುಮಾರ್ ಈ ಹಿಂದೆ ಮೇಕೇದಾಟಿಗೆ ಹೋರಾಡಿದ್ದರು. ಮೇಕೆದಾಟು ಮಾಡಲೇಬೇಕು. ಮೇಕೆದಾಟು ಆದರೆ ನೀರು ಬಿಡಬಹುದು, ವಿದ್ಯುತ್ ಸಿಗುತ್ತದೆ. ಮೇಕೆದಾಟಿಗೂ ಮುಂಚೆ ಕಾಡು, ಪ್ರಾಣಿಗಳನ್ನು ಉಳಿಸಬೇಕು ಎಂದರು. ಮಹದಾಯಿ, ಕಳಸಾ ಬಂಡೂರಿ ಬಗ್ಗೆಯೂ ಹೋರಾಟ ಮಾಡುತ್ತೇವೆ. ಇಡೀ ಅಖಂಡ ಕರ್ನಾಟಕ ಬೇಕು. ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕದ ಬಗ್ಗೆಯೂ ಹೋರಾಟ ಮಾಡುತ್ತೇವೆ. ಉದ್ಯೋಗಗಳು ಪರಭಾಷಿಕರಿಗೆ ಸಿಗುತ್ತಿವೆ. ಅಸೆಂಬ್ಲಿಯಲ್ಲಿ ಉತ್ತರ ಕರ್ನಾಟಕ, ಹೈದರಾಬಾದ್ ಕರ್ನಾಟಕಕ್ಕೆ ಏನು ಮಾಡಿದ್ದೀರಾ ಅಂತಾ ಶ್ವೇತಪತ್ರ ಹೊರಡಿಸಬೇಕು. ಇಂದಿನ ಬಂದ್ ಪೋಲಿಸರ ದರ್ಪವಾಗಿದೆ. ಕಾವೇರಿ ನೀರು ಬಿಟ್ಟ ತಕ್ಷಣ ಸರ್ಕಾರದ ವಿರುದ್ಧ ಬಂದ್‌ಗೆ ಕರೆ ಕೊಡುತ್ತೇನೆ.



ದಿನಾಂಕ : 14-08-2026

# ಸಿನಿ ಕಹಾನಿ

ಅನಂತ ಜನಶಕ್ತಿ



## ನಾನಿ ನಟನೆಯ ದಿ ಪ್ಯಾರಡೈಸ್ ಟೀಸರ್ ರಿಲೀಸ್

'ನ್ಯಾಚುರಲ್ ಸ್ಟಾರ್' ನಾನಿ ಅಭಿನಯದ ಬಹುನಿರೀಕ್ಷಿತ ಪ್ಯಾನ್-ವರ್ಲ್ಡ್ 'ದಿ ಪ್ಯಾರಡೈಸ್' ಚಿತ್ರದ ಮಾಸ್ ಟೀಸರನ್ನು ಚಿತ್ರತಂಡ ಇತ್ತೀಚೆಗಷ್ಟೇ ಅನಾವರಣಗೊಳಿಸಿದೆ. ದಸರಾ ಯಶಸ್ಸಿನ ನಂತರ ಶ್ರೀಕಾಂತ್ ಒಡೆಲ ಹಾಗೂ ನಾನಿ ಕಾಂಬಿನೇಷನ್‌ನಲ್ಲಿ ಮೂಡಿಬರುತ್ತಿರುವ ಈ ಚಿತ್ರ, ಟೀಸರ್ ಮೂಲಕ ಪ್ರೇಕ್ಷಕರಲ್ಲಿ ತೀವ್ರ ಕುತೂಹಲ ಮೂಡಿಸಿದೆ. ಎಸ್‌ಎಲ್ವಿ ಸಿನೆಮಾಸ್ ಬ್ಯಾನರ್ ಅಡಿ ಸುಧಾಕರ್ ಚೆರುಕೂರಿ ಅವರು ಈ ಚಿತ್ರವನ್ನು ಬೃಹತ್ ವೆಚ್ಚದಲ್ಲಿ ನಿರ್ಮಿಸಿದ್ದಾರೆ. ಈ ಟೀಸರ್ ಪ್ರೇಕ್ಷಕರನ್ನು ಕತ್ತಲೆ, ದೌರ್ಜನ್ಯ ಮತ್ತು ಹಿಂಸೆಯಿಂದ ಕೂಡಿದ ಕಠೋರ ಜಗತ್ತಿಗೆ ಕರೆದೊಯ್ಯುತ್ತದೆ. ಶೋಷಿತರ ಪರವಾಗಿ ಮತ್ತು ವಿಲನ್‌ಗಳ ಪಾಲಿನ ಸಿಂಹಸ್ವಪ್ನವಾಗಿ ನಿಲ್ಲುವ 'ಜಡಾಲ್' ಎಂಬ ಕ್ರಾಂತಿಕಾರಿ ಪಾತ್ರದಲ್ಲಿ ನಾನಿ ಕಾಣಿಸಿಕೊಂಡಿದ್ದಾರೆ. ಚಿತ್ರದಲ್ಲಿ ಪದೇಪದೇ ಕಾಣಿಸಿಕೊಳ್ಳುವ ಕಾಗೆಯ ಸಂಕೇತವು ತಲೆಮಾರುಗಳಿಂದ ಮೂಲೆಗುಂಪಾದ ಜನರ ಆಕ್ರೋಶವನ್ನು ಬಿಂಬಿಸುತ್ತದೆ. ಕೊಡಲಿ ಕಾಳಗ, ತೀವ್ರ ಸ್ವರೂಪದ ಜೈಲು ಫೈಟ್, ಭೀಕರ ಖಡ್ಗಕಾಳಗ, ಮುಷ್ಟಿಕಾಳಗ ಹಾಗೂ ಸರಣಿ ಸ್ಫೋಟಗಳ ದೃಶ್ಯಗಳು ಚಿತ್ರದ ಹೈಲೈಟ್ ಆಗಿವೆ.

ಈ ಚಿತ್ರದಲ್ಲಿ ನಾನಿ ಸಂಪೂರ್ಣ ವಿಭಿನ್ನ ಹಾಗೂ ಭಯ ಹುಟ್ಟಿಸುವ ಗೆಟಪ್‌ನಲ್ಲಿ ಕಾಣಿಸಿಕೊಂಡಿದ್ದು, ಅವರ ಡೈಲಾಗ್ ಡಿಲವರಿ ಮತ್ತು ಅಭಿನಯ ಪ್ರೇಕ್ಷಕರನ್ನು ರಂಜಿಸಲಿದೆ. ನಟ ಮೋಹನ್‌ಬಾಬು ಅವರ ಎಂಟ್ರಿ ಖಡಕ್ ಆಗಿದ್ದು, ರಾಘವ್ ಜುಯಲ್, ಕಾಯಾದು ಲೋಹರ್, ಸೊನಾಲಿ ಕುಲಕರ್ಣಿ ಮತ್ತು ಸಂಪೂರ್ಣೇಶ್ ಬಾಬು ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. ಅನಿರುದ್ಧ್ ರವಿಚಂದರ್ ಅವರ ಸಂಗೀತ ಸಂಯೋಜನೆ ಈ ಚಿತ್ರಕ್ಕಿದೆ, ಶ್ರೀಕಾಂತ್ ಒಡೆಲ ಅವರ ನಿರ್ದೇಶನದ ಈ ಚಿತ್ರವನ್ನು ಸುಧಾಕರ್ ಚೆರುಕೂರಿ ಅವರು ನಿರ್ಮಾಣ ಮಾಡಿದ್ದಾರೆ. ಸಿ.ಹೆಚ್. ಸಾಯಿ ಅವರ ಛಾಯಾಗ್ರಹಣ, ಅವಿನಾಶ್ ಕೊಲ್ಲಾ ಅವರ ಪ್ರೊಡಕ್ಷನ್ ಡಿಸೈನಿಂಗ್ ಇರುವ 'ದಿ ಪ್ಯಾರಡೈಸ್' ಚಿತ್ರವು ಸೆಪ್ಟೆಂಬರ್ 24ಕ್ಕೆ ಪ್ರಪಂಚದಾದ್ಯಂತ ಅದ್ದೂರಿಯಾಗಿ ಬಿಡುಗಡೆಯಾಗಲಿದೆ.

## ಸ್ಲಮ್‌ಡಾಗ್ ಗ್ಲಿಂಪ್ಸ್ ಬಿಡುಗಡೆ ಗೌರಿ ಹೆಗ್ಡೆ ಪಾತ್ರದಲ್ಲಿ ಟಬು!



ನಿರ್ದೇಶಕ ಪೂರಿ ಜಗನ್ನಾಥ್ ಮತ್ತು ನಟ ವಿಜಯ್ ಸೇತುಪತಿ ಮೊದಲಬಾರಿಗೆ ಒಂದಾಗಿರುವ ಆಕ್ಷನ್ ಡ್ರಾಮಾ ಚಿತ್ರ 'ಸ್ಲಮ್‌ಡಾಗ್, 33 ಟೆಂಪಲ್ ರೋಡ್' ಭರ್ಜರಿ ಆಕ್ಷನ್ ಮತ್ತು ನಿಗೂಢತೆಯ ಮಿಶ್ರಣವಾಗಿದೆ. ಇತ್ತೀಚೆಗಷ್ಟೇ ಗೌರಿಹೆಗ್ಡೆ ಪಾತ್ರದಲ್ಲಿ ನಟಿಸಿರುವ ಟಬು ಅವರು ಫಸ್ಟ್‌ಲುಕ್ ಅನಾವರಣಗೊಳಿಸಿದ್ದ ಚಿತ್ರತಂಡ, ಈಗ ಅವರ ಶಕ್ತಿಶಾಲಿ ಪಾತ್ರದ ಪರಿಚಯ ನೀಡುವ ಒಂದು ಪವರ್‌ಫುಲ್ ಗ್ಲಿಂಪ್ಸ್(ಟೀಸರ್) ಬಿಡುಗಡೆ ಮಾಡಿದೆ. ನಗರದ ಕೊಳಚೆ ಪ್ರದೇಶಗಳ(ಸ್ಲಮ್) ಹಿನ್ನೆಲೆಯಲ್ಲಿ ಸಾಗುವ ಈ ಗ್ಲಿಂಪ್ಸ್, ಮೊದಲಿಗೆ ಸಿನಿಮಾದ ಕಚ್ಚಾ ಮತ್ತು ನೈಜ ಜಗತ್ತನ್ನು ಪರಿಚಯಿಸುತ್ತದೆ. ನಂತರ ಟಬು ಅವರ ಎಂಟ್ರಿಯನ್ನು ಅತ್ಯಂತ ಆಕರ್ಷಕವಾಗಿ ತೋರಿಸಲಾಗಿದೆ. ಕಾರಿನಲ್ಲಿ ಆಗಮಿಸುವ ಅವರು, ತಕ್ಷಣವೇ ಪರಿಸ್ಥಿತಿಯನ್ನು ತಮ್ಮ ನಿಯಂತ್ರಣ-ಕ್ಕೆ ತೆಗೆದುಕೊಳ್ಳುತ್ತಾರೆ. ಸ್ಥಳೀಯ ಗೂಂಡಾಗೆ ನೀಡುವ ಖಡಕ್ ಎಚ್ಚರಿಕೆ ಮತ್ತು ಆನಂತರ ನೀಡುವ ಒಂದು ಕಪಾಳಮೋಕ್ಷ, ಗೌರಿ ಹೆಗ್ಡೆ ಅಧಿಕಾರವನ್ನು ಕೇಳಿ ಪಡೆಯುವವಳಲ್ಲ, ಬದಲಾಗಿ ಅಧಿಕಾರವನ್ನು ತಾನೇ ಚಲಾಯಿಸುವ ಮಹಿಳೆ ಎಂಬುದನ್ನು ತೋರಿಸುತ್ತದೆ. ಈ ಪಾತ್ರ ಕೇವಲ ಒಬ್ಬ ಶಕ್ತಿಶಾಲಿ ಅಧಿಕಾರಿ ಮಾತ್ರವಲ್ಲದೆ, ಯಾವುದೇ ಭಯವಿಲ್ಲದ ಮತ್ತು ಯಾವ ರಾಜಿಯನ್ನೂ ಮಾಡಿಕೊಳ್ಳದ ವ್ಯಕ್ತಿಯಾಗಿ ತೋರಿಸಲಾಗಿದೆ. ಗೌರಿ ಹೆಗ್ಡೆ ಬೀದಿಗಳ ಮಧ್ಯದಲ್ಲೇ ಗೂಂಡಾಗಳನ್ನು ಎದುರಿಸುತ್ತಾಳೆ; ಅವರೊಂದಿಗೆ ಕಾದಾಡುತ್ತಾ ಲಾಠಿ ಬೀಸಿ ಪರಿಸ್ಥಿತಿಯನ್ನು ಹತೋಟಿಗೆ ತರುತ್ತಾಳೆ. ಸುತ್ತಲೂ ಪೊಲೀಸರು ಮತ್ತು ಜನರ ಗುಂಪೇ ಇದ್ದರೂ, ಧೃತಿಗೆಡದೆ ತನ್ನ ಅಧಿಕಾರಕ್ಕೆ ಸವಾಲು ಹಾಕುವವರನ್ನು ಹತೋಟಿಗೆ ತರುತ್ತಾಳೆ.

ಟಬು ಅವರು ತಮ್ಮ ಸ್ಕ್ರೀನ್ ಪ್ರೆಸೆನ್ಸ್ ಮೂಲಕ ಪಾತ್ರಕ್ಕೆ ಜೀವ ತುಂಬಿದ್ದು, ಗಂಭೀರವಾಗಿ ಮತ್ತು ಪ್ರಭಾವಶಾಲಿಯಾಗಿ ಕಾಣಿಸಿಕೊಂಡಿದ್ದಾರೆ. ಅವರು ಗೌರಿ ಹೆಗ್ಡೆ ಪಾತ್ರಕ್ಕೆ ವಿಶಿಷ್ಟವಾದ ಅಧಿಕಾರ ಮತ್ತು ಭಯ ಹುಟ್ಟಿಸುವ ಗಾಂಭೀರ್ಯವನ್ನು ತಂದಿದ್ದು, ಪಾತ್ರದ ಮೇಲಿನ ಕುತೂಹಲವನ್ನು ಹೆಚ್ಚಿಸುತ್ತಾರೆ. ಈ ಚಿತ್ರದಲ್ಲಿ ಸಂಯುಕ್ತಾ ನಾಯಕಿಯಾಗಿದ್ದು, ದುನಿಯಾ ವಿಜಯ್ ನೆಗಟಿವ್ ಪಾತ್ರದಲ್ಲಿದ್ದಾರೆ. ಬ್ರಹ್ಮಾಜಿ ಮತ್ತು ವಿಟಿವಿ ಗಣೇಶ್ ಕೂಡ ನಟಿಸಿದ್ದಾರೆ. ಸ್ಯಾಮ್ ಕೆ.ನಾಯ್ಡು ಅವರು ಛಾಯಾಗ್ರಹಣ, ಹರ್ಷವರ್ಧನ್ ರಾಮೇಶ್ವರ್ ಅವರ ಸಂಗೀತ ಸಂಯೋಜನೆ, ಸಂತೋಷ್ ನೂಜಿಲ್ಲ ಅವರ ಸಂಕಲನ ಈ ಚಿತ್ರಕ್ಕಿದೆ, ಸ್ಲಮ್ ಡಾಗ್ ಚಿತ್ರವನ್ನು ಪೂರಿ ಕನೆಕ್ಟ್ಸ್ ಬ್ಯಾನರ್ ಅಡಿ ಪೂರಿ ಜಗನ್ನಾಥ್ ಮತ್ತು ಚಾರ್ಮಿ ಕೌರ್ ಅವರು, ಜೆಬಿ ಮೋಷನ್ ಪಿಕ್ಚರ್ಸ್ ಜೆಬಿ ನಾರಾಯಣರಾವ್ ಕೊಂಡ್ರೊಲ್ಲಾ ಅವರ ಸಹಯೋಗದೊಂದಿಗೆ ನಿರ್ಮಿಸುತ್ತಿದ್ದಾರೆ.

## "ಸೆಕೆಂಡ್ ಕೇಸ್ ಆಫ್ ಸೀತಾರಾಮ" 25 ಕೋಟಿಗೂ ಅಧಿಕ ಸ್ಟ್ರೀಮಿಂಗ್ ನಿಮಿಷಗಳ ದಾಖಲೆ!

ಕಂಟೆಂಟ್ ಆಧಾರಿತ ಚಿತ್ರಗಳು ಜಾಗತಿಕ ಮಟ್ಟದಲ್ಲಿ ಸದ್ದು ಮಾಡುತ್ತಿರುವ ಬೆನ್ನಲ್ಲೇ, ಕನ್ನಡದ 'ಸೆಕೆ-ಂಡ್ ಕೇಸ್ ಆಫ್ ಸೀತಾರಾಮ್ ಚಿತ್ರವು ಡಿಜಿಟಲ್ ಲೋಕದಲ್ಲಿ ಅಭೂತಪೂರ್ವ ಯಶಸ್ಸು ಕಂಡಿದೆ. ಅಮೆಜಾನ್ ಪ್ರೈಮ್ ವೀಡಿಯೊದಲ್ಲಿ ಭಾರತದ ಟಾಪ್ 10 ಸಿನಿಮಾಗಳ ಪಟ್ಟಿಯಲ್ಲಿ ಸತತ 15 ವಾರಗಳಿಂದ ತನ್ನ ಸ್ಥಾನವನ್ನು ಕಾಯ್ದುಕೊಳ್ಳುವ ಮೂಲಕ, ಬರೋಬ್ಬರಿ 250 ಮಿಲಿಯನ್‌ಗಿಂತ ಹೆಚ್ಚು ಸ್ಟ್ರೀಮಿಂಗ್ ನಿಮಿಷಗಳನ್ನು ಪೂರೈಸಿ ಒಟಿಟಿಯಲ್ಲಿ ಹೊಸ ಮೈಲಿಗಲ್ಲು ಸ್ಥಾಪಿಸಿದೆ.

ಈ ಚಿತ್ರದಲ್ಲಿ ವಿಜಯ್ ರಾಘವೇಂದ್ರ, ಗೋಪಾಲಕೃಷ್ಣ ದೇಶಪಾಂಡೆ ಮತ್ತು ಸಾಗರ್ ಪುರಾಣಿಕ್ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದು, ನೈಜ ಅಭಿನಯದ ಮೂಲಕ ಗಮನ ಸೆಳೆದಿದ್ದಾರೆ. ಬಿಗಿಯಾದ ಚಿತ್ರಕಥೆ ಹಾಗೂ ಅದಕ್ಕೆ ಪೂರಕವಾದ ತಾರಾಗಣದ ಬದ್ಧತೆಯೇ ಈ ಚಿತ್ರ ವಾರದಿಂದ ವಾರಕ್ಕೆ ಪ್ರೇಕ್ಷಕರನ್ನು ತನ್ನತ್ತ ಸೆಳೆಯಲು ಮುಖ್ಯ ಕಾರಣವಾಗಿದೆ.

ನಿರ್ದೇಶಕ ದೇವಿಪ್ರಸಾದ್ ಶೆಟ್ಟಿ ಅವರು ಸಸ್ಪೆನ್ಸ್, ಭಾವನೆಗಳು ಹಾಗೂ ನೈಜತೆಯನ್ನು ಸಂಯೋಜಿಸಿ ಈ ಥ್ರಿಲ್ಲರ್ ಚಿತ್ರವನ್ನು ತೆರೆಗೆ ತಂದಿದ್ದಾರೆ. ಈ ವರ್ಷ ಒಟಿಟಿಯಲ್ಲಿ ಹೆಚ್ಚು ಚರ್ಚಿಸಲ್ಪಟ್ಟ ಪ್ರಮುಖ ಕನ್ನಡ ಥ್ರಿಲ್ಲರ್ ಸಿನಿಮಾಗಳಲ್ಲಿ ಒಂದಾಗಿ 'ಸೆಕೆಂಡ್ ಕೇಸ್ ಆಫ್ ಸೀತಾರಾಮ್' ಗುರುತಿಸಿಕೊಂಡಿದೆ. ಪವನ್ ಒಡೆಯರ್ ಅವರ ಪ್ರಸ್ತುತಪಡಿಸಿರೋ ಈ ಚಿತ್ರವನ್ನು ದೇವಿಪ್ರಸಾದ್ ಶೆಟ್ಟಿ ಮತ್ತು ಸಾತ್ವಿಕ್ ಹೆಬ್ಬಾರ್ ಜಂಟಿಯಾಗಿ ನಿರ್ಮಿಸಿದ್ದು, ಇವರ ಶ್ರಮದಿಂದಾಗಿ ಈ ಚಿತ್ರ ಕನ್ನಡದ ಜೊತೆ ತಮಿಳು, ತೆಲುಗು ಮತ್ತು ಹಿಂದಿ ಭಾಷೆಗಳಲ್ಲೂ ಪ್ರಸಾರವಾಗಿ ಯಶಸ್ಸು ಕಂಡಿದೆ.

ಒಟಿಟಿ ವೇದಿಕೆಯಲ್ಲಿ 250+ ಮಿಲಿಯನ್ ಸ್ಟ್ರೀಮಿಂಗ್ ನಿಮಿಷಗಳನ್ನು ದಾಟುವುದು ಮತ್ತು ಭಾರತದ ಟಾಪ್ 10 ಪಟ್ಟಿಯಲ್ಲಿ ಸತತ 15 ವಾರಗಳ ಕಾಲ ಮುಂದುವರಿಯುವುದು ಸಾಮಾನ್ಯ ವಿಷಯವಲ್ಲ. ಈ ಸಾಧನೆಯು ಭಾರತೀಯ ಚಿತ್ರರಂಗದ ಮಟ್ಟದಲ್ಲಿ ಕನ್ನಡ ಸಿನಿಮಾಗಳ ಕಂಟೆ-ಂಟ್ ಮತ್ತು ಕಥೆ ಹೇಳುವಿಕೆಯ ಶಕ್ತಿಗೆ ಹಿಡಿದ ಕನ್ನಡಿಯಾಗಿದ್ದು, ಇಡೀ ಕನ್ನಡ ಚಿತ್ರರಂಗವೇ ಹೆಮ್ಮೆಪಡುವಂತೆ ಮಾಡಿದೆ.




## ಸೆಲೆಬ್ರಿಟಿ ತಾಯಿ ಮಗನ ಹಾಡಿಗೆ ನಿಖಿಲ್ ಸಾಥ್

ಸಾರಾ ಮಹೇಶ್ ಹಾಗೂ ಸುಷ್ಮಾ ಅಶ್ವಿನ್ ಅವರ ನಿರ್ಮಾಣದ ಸೆಲೆಬ್ರಿಟಿ ಚಿತ್ರದ ಶೂಟಿಂಗ್ ಕೊನೇ ಹಂತ ತಲುಪಿದೆ. ಕಿರಣ್ ವಿಶ್ವನಾಥ್ ಅವರ ನಿರ್ದೇಶನದ ಈ ಚಿತ್ರದ ನಾಯಕನಾಗಿ ಅಶ್ವಿನ್ ಹಾಗೂ ಮಹಾನಟಿ ಖ್ಯಾತಿಯ ಪ್ರಿಯಾಂಕಾ ಆಚಾರ್ ನಾಯಕಿಯಾಗಿ ನಟಿಸುತ್ತಿದ್ದಾರೆ. ಯಾರೇನೀನು ಚೆಲುವೆ ಖ್ಯಾತಿಯ ಸಂಗೀತಾ ಅವರು ಈ ಚಿತ್ರದ ಮೂಲಕ ಕನ್ನಡಕ್ಕೆ ಕಮ್‌ಬ್ಯಾಕ್ ಆಗುತ್ತಿದ್ದಾರೆ. ಇತ್ತೀಚೆಗೆ ಈ ಚಿತ್ರದ ತಾಯಿ ಮಗನ ಬಾಂಧವ್ಯದ ಹಾಡನ್ನು ಕೆ.ಆರ್.ನಗರದಲ್ಲಿ ಜೆಡಿಎಸ್ ಯುವನಾಯಕ ನಿಖಿಲ್ ಕುಮಾರಸ್ವಾಮಿ ಅವರು ಬಿಡುಗಡೆ ಮಾಡಿದರು. ಈವೇಳೆ ಮಾತನಾಡಿದ ನಿಖಿಲ್, ಒಬ್ಬ ತಾಯಿ ತನ್ನ ಮಗನಮೇಲೆ ಎಷ್ಟು ಪ್ರೀತಿ ಇಟ್ಟುಕೊಂಡಿರುತ್ತಾಳೆ ಎಂದು ತೋರಿಸುವ ಈ ಸೆಂಟಿಮೆಂಟ್ ಸಾಂಗ್ ತುಂಬಾ ಚೆನ್ನಾಗಿ ಮೂಡಿಬಂದಿದೆ. ಅಶ್ವಿನ್ ಬಹಳ ವರ್ಷಗಳಿಂದ ನಟನಾಗಬೇಕೆಂದು ಟ್ರೈ ಮಾಡುತ್ತಿದ್ದರು. ಅವರಿಗೆ ಕನ್ನಡ ಜನತೆ ಹರಸಿ ಆಶೀರ್ವದಿಸಬೇಕು. ನಾನೂ ಕೂಡ ಚಿತ್ರರಂಗದಿಂದ ಬಂದವನು, ಸದ್ಯ ರಾಜಕಾರಣದ ಒತ್ತಡದಿಂದ ಈಕಡೆ ಗಮನ ಹರಿಸಲು ಸಾಧ್ಯವಾಗಿಲ್ಲ ಎಂದು ಹೇಳಿದರು. ನಾಯಕ ಅಶ್ವಿನ್ ಮಾತನಾಡುತ್ತ ನಮ್ಮ ಚಿತ್ರದ ಮೊದಲ ಹಾಡು ಬಿಡುಗಡೆಯಾಗಿದೆ, ಈ ಹಾಡನ್ನು ಯಾ-ರೇ ನೋಡಿದರೂ ಅವರ ತಾಯಿ ನೆನಪಾಗುತ್ತಾರೆ, ಹಿರಿಯನಟಿ ಸಂಗೀತಾ ಅವರು ನನ್ನ ತಾಯಿಯ ಪಾತ್ರ ಮಾಡಿದ್ದಾರೆ. ನಮ್ಮಂಥ ಹೊಸಬರ ಸಿನಿಮಾದಲ್ಲಿ ನಟಿಸಲು ಅವರು ಒಪ್ಪಿರುವುದೇ ನಮಗೆಲ್ಲ ಖುಷಿ. ತಾಯಿಗೆ ಏನೇ ಕಷ್ಟ ಇದ್ದರೂ ತನ್ನ ಮಗನಿಗೆ ಒಳ್ಳೇದಾಗಬೇಕು ಅಂತ ಪ್ರಯತ್ನಿಸುತ್ತಾಳೆ. ಆ ಸಂದರ್ಭದಲ್ಲಿ ಬರುವ ಹಾಡಿದು, ಡಿಸೆಂಬರ್ ವೇಳೆಗೆ ಚಿತ್ರವನ್ನು ರಿಲೀಸ್ ಮಾಡುವ ಯೋಜನೆಯಿದೆ, ಅತಿಥಿ ಪಾತ್ರದಲ್ಲಿ ದಕ್ಷಿಣದ ಖ್ಯಾತ ಕಲಾವಿದರೊಬ್ಬರು ನಟಿಸುತ್ತಿದ್ದು ಸದ್ಯದಲ್ಲೇ ಅವರನ್ನು ಪರಿಚಯಿಸಲಾಗುತ್ತೆ ಎಂದರು.



## ಮಹಾನ್ ಜತೆಯಾದ ನಮ್ರತಾಗೌಡ

ಶಿವರಾಜ್‌ಕುಮಾರ್, ವಿಜಯ ರಾಘವೇಂದ್ರ ನಾಯಕರಾಗಿ ನಟಿಸುತ್ತಿರುವ ಮಹಾನ್ ಚಿತ್ರದಲ್ಲಿ ಕನ್ನಡದ ಸಾಕಷ್ಟು ಮೇರುಕಲಾವಿದರು ಅಭಿನಯಿಸಿದ್ದಾರೆ. ಬಿಗ್‌ಬಾಸ್ ನಮ್ರತಾಗೌಡ ಹಾಗೂ ಹಾಗೆ ಸುಮ್ಮನೆ ಖ್ಯಾತಿಯ ಕಿರಣ್ ಶ್ರೀನಿವಾಸ್ ಕೂಡ ಚಿತ್ರದಲ್ಲಿ ನಟಿಸಿದ್ದು, ಇತ್ತೀಚೆಗೆ ಅವರ ಫಸ್ಟ್‌ಲುಕ್‌ನ್ನು ಚಿತ್ರತಂಡ ಬಿಡುಗಡೆ ಮಾಡಿದೆ.

ನಿರ್ದೇಶಕ ಪಿ.ಸಿ.ಶೇಖರ್ ಈ ಚಿತ್ರದ ಕಥೆ ಹೇಳುತ್ತಿರುವಾಗಲೇ ನನ್ನ ಪಾತ್ರ ಇಷ್ಟವಾಯಿತು. ನಗರದಲ್ಲಿ ವಿದ್ಯಾಭ್ಯಾಸ ಮಾಡಿ, ಹಳ್ಳಿಗೆ ಬಂದು ರೈತರು ಕಷ್ಟಗಳಿಗೆ ಧ್ವನಿಯಾಗುವ ವಿದ್ಯಾವಂತ ಹೆಣ್ಣುಮಗಳಾಗಿ ನಾನು ನಟಿಸಿದ್ದೇನೆ. ಶಿವಣ್ಣ, ವಿಜಯ ರಾಘವೇಂದ್ರ, ರಾಧಿಕಾ ನಾರಾಯಣ್, ಮಿತ್ರ ಹೀಗೆ ದಿಗ್ಗಜ ಕಲಾವಿದರಿರುವ ಚಿತ್ರದಲ್ಲಿ ನಾನು ನಟಿಸಿರುವುದು ತುಂಬಾ ಖುಷಿಯಾಗಿದೆ ಎನ್ನುತ್ತಾರೆ ನಮ್ರತಾಗೌಡ.






ಉದ್ಯೋಗಕ್ಕಾಗಿ ವಿದೇಶಕ್ಕೆ ಹೋಗುವ ಹಂಬಲ ಇಟ್ಟುಕೊಂಡ ಹಳ್ಳಿಯ ವಿದ್ಯಾವಂತ ಹುಡುಗನಾಗಿ ನಾನು ನಟಿಸಿದ್ದೇನೆ, ಹಳ್ಳಿಗೆ ಬಂದು ಆತ ಏನು ಮಾಡುತ್ತಾನೆ ಎನ್ನುವುದೆ ನನ್ನ ಪಾತ್ರದ ಕಥೆ ಎನ್ನುತ್ತಾರೆ ನಾಯಕನಟ ಕಿರಣ್ ಶ್ರೀನಿವಾಸ್. ಮಹಾನ್ ರೈತರ ಕುರಿತಾದ ಹಾಗೂ ಸಮಾಜಕ್ಕೆ ಉತ್ತಮ ಸಂದೇಶ ನೀಡುವ ಚಿತ್ರವೂ ಹೌದು. ವಿಜಯ ರಾಘವೇಂದ್ರ ಚಿತ್ರದ ನಾಯಕರಾಗಿ ನಟಿಸಿದ್ದು, ವಿಶೇಷ ಪಾತ್ರದಲ್ಲಿ ಶಿವರಾಜಕುಮಾರ್ ಅಭಿನಯಿಸಿದ್ದಾರೆ.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.